

# ಬೆಳಗಾವಿ ವರದಿ

ಪ್ರಧಾನ ಸಂಪಾದಕರು: ಸತೀಶ್.ಬಿ.ಜಿ

BELAGAVI VARADI KANNADA DAILY

ಕನ್ನಡ ದಿನಪತ್ರಿಕೆ 24

Read,Share and Follow - www.belagavivaradi.com

Vol-04 Issue: 264 ₹ ಬೆಲೆ: 4 Thursday, 14, December.2023 newsbelagavi@gmail.com 9900332089 Regn,No:G-2/PMG/KA/NK/BM/139/2021-23


## ಸಾರ್ವಜನಿಕ ಉದ್ಯಮಗಳ ಸಮಿತಿ ವರದಿ ಮಂಡನೆ

ಬೆಳಗಾವಿ: ಸುವರ್ಣ ಸೌಧ: ಶಾಸಕ ಯು.ಬಿ.ಬಣಕಾರ್ ಅವರು ಬುಧವಾರ ವಿಧಾನಸಭೆಯಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಸಂಬಂಧಿಸಿದಂತೆ ಭಾರತದ ಲೆಕ್ಕನಿಯಂತ್ರಕರು ಮತ್ತು ಮಹಾಲೆಕ್ಕಪರಿಶೋಧಕರ "ಕರ್ನಾಟಕ ಗ್ರಾಮೀಣ ಮೂಲಭೂತ ಸೌಕರ್ಯ ಅಭಿವೃದ್ಧಿ ನಿಯಮಿತಕ್ಕೆ ಸಂಬಂಧಿಸಿದ ಕಾರ್ಯನಿರ್ವಹಣಾ ಲೆಕ್ಕಪರಿಶೋಧನೆಯ ಮೇಲಿನ ಸಮಿತಿಯ ಶಿಫಾರಸ್ಸುಗಳನ್ನೊಳಗೊಂಡ ಸಾರ್ವಜನಿಕ ಉದ್ಯಮಗಳ ಸಮಿತಿಯ 136ನೇ ವರದಿಯನ್ನು ಸದನದ ಮುಂದೆ ಮಂಡಿಸಿದರು.

## ಸಂಸತ್ತ ಸದನಕ್ಕೆ ಆಗುಂತಕರ ಪ್ರವೇಶ ಖಂಡಿಸಿ ವಿಧಾನಸಭೆ ನಿರ್ಣಯ ಅಂಗೀಕಾರ

ಬೆಳಗಾವಿ: ಸುವರ್ಣ ಸೌಧ: ಇಂದು ದೇಶದ ಪ್ರಜಾಪ್ರಭುತ್ವದ ಪವಿತ್ರ ಸ್ಥಳವಾದ ದೆಹಲಿಯ ಸಂಸತ್ತಿನಲ್ಲಿ ಆಗುಂತಕ ವ್ಯಕ್ತಿಗಳು ಸದನಕ್ಕೆ ಪ್ರವೇಶಿಸಿದ್ದು, ಕಳವಳಕಾರಿಯಾಗಿದ್ದು, ಈ ಭದ್ರತಾ ವೈಫಲ್ಯವನ್ನು ಖಂಡಿಸಿ, ಕರ್ನಾಟಕ ವಿಧಾನಸಭೆ ಇಂದು ಸಂಜೆ ಘಟನೆಯನ್ನು ಖಂಡಿಸಿ, ಸದನದಲ್ಲಿ ಖಂಡನಾ ನಿರ್ಣಯ ಅಂಗೀಕರಿಸಿತು. ಕಲಾಪ ಮಧ್ಯದಲ್ಲಿ ವಿಷಯ ಪ್ರಸ್ತಾಪಿಸಿದ ಪ್ರವಾಸೋದ್ಯಮ, ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಹೆಚ್.ಕೆ. ಪಾಟೀಲ, ಸಂಸತ್ತಿನಲ್ಲಿ ಇಂದು ಅಪರಿಚಿತ, ಆಂಗುತಕರು ಪ್ರವೇಶಿಸಿ, ಭಯ ಹುಟ್ಟಿಸಿರುವುದು ತೀವ್ರ ಖಂಡನೀಯವಾದದ್ದು. ಈ ಘಟನೆಯನ್ನು ಸದನವು ಖಂಡಿಸಿ ನಿರ್ಣಯ ಕೈಗೊಳ್ಳಬೇಕೆಂದು ವಿಷಯ ಪ್ರಸ್ತಾಪಿಸಿದರು. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮಾತನಾಡಿ, ಸಂಸತ್ ಸದನ ಪ್ರವೇಶಿಸಿ ಭಯ ಹುಟ್ಟಿಸಿದ ಘಟನೆ ಅತ್ಯಂತ ಖಂಡನೀಯವಾದದ್ದು. ಇದನ್ನು ರಾಜ್ಯದ ಜನತೆಯ ಪರವಾಗಿ ಖಂಡಿಸಬೇಕು. ರಾಜ್ಯ ವಿಧಾನಮಂಡಲದ ಕಲಾಪಗಳಿಗೂ ಸುರಕ್ಷತೆಯ ದೃಷ್ಟಿಯಿಂದ ಇದು ಪಾಠವಾಗಬೇಕು. ಸದನ ಸದಸ್ಯರು ಪ್ರವೇಶ ಪತ್ರಗಳನ್ನು ನೀಡುವಾಗ ಎಚ್ಚರಿಕೆ ವಹಿಸಿ ಪೂರ್ವಾಪರ ವಿಚಾರಿಸಿ ಪರಿಚಯಸ್ಥರಿಗೆ ಮಾತ್ರ ನೀಡಬೇಕು. ತಪಾಸಣೆ ತೀವ್ರವಾಗಬೇಕು. ಭದ್ರತಾ ಲೋಪವಾಗದಂತೆ ಕಟ್ಟುನಿಟ್ಟಾಗಿ ನೋಡಿಕೊಳ್ಳಬೇಕು. ಈ ಕುರಿತು ತಮ್ಮ ಸಿಬ್ಬಂದಿಗಳಿಗೂ ಸೂಚನೆ ನೀಡಬೇಕೆಂದು ಸಭಾಧ್ಯಕ್ಷರಿಗೆ ತಿಳಿಸಿದರು. ಸಭಾಧ್ಯಕ್ಷ ಯು.ಟಿ. ಖಾದರ್ ಅವರು ಮಾತನಾಡಿ, ಘಟನೆಯನ್ನು ರಾಜ್ಯದ ಪರವಾಗಿ ಕಠಿಣವಾಗಿ ಖಂಡಿಸುತ್ತೇವೆ. ಇಂದು ಸದನಕ್ಕೆ ಅಕ್ರಮವಾಗಿ ಪ್ರವೇಶಿಸಿದ ಆಗುಂತಕರಿಗೆ ಕಠಿಣ ಕ್ರಮವಾಗಬೇಕು. ಸದನಗಳ ಪ್ರವೇಶಕ್ಕೆ ಪಾಸ್ ನೀಡುವಾಗ ಅವರ ಆಧಾರ್ ಕಾರ್ಡ್ ಪರಿಶೀಲಿಸಿ, ಸರಿಯಾದ ಪರಿಚಯ ನೋಡಿ ನೀಡಬೇಕು ಎಂದು ಹೇಳಿದರು. ಘಟನೆಯನ್ನು ಖಂಡಿಸಿ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಗೃಹ ಸಚಿವ ಡಾ. ಜಿ. ಪರಮೇಶ್ವರ, ವಿಪಕ್ಷ ನಾಯಕ ಆರ್. ಅಶೋಕ, ಶಾಸಕರಾದ ಸುರೇಶಕುಮಾರ್, ಅರಗ ಜ್ಞಾನೇಂದ್ರ ಸೇರಿದಂತೆ ಇತರರು ಮಾತನಾಡಿದರು.

# ಲೋಕಸಭೆಗೆ ನುಗ್ಗಿದ ಆಗಂತುಕರು

## ಗುಪ್ತಚರ ಇಲಾಖೆಯಿಂದ ಮೈಸೂರು ಮೂಲದ ವ್ಯಕ್ತಿಗಳು ಸೇರಿ ನಾಲ್ವರು ವಶಕ್ಕೆ ■ ಸಂದರ್ಶಕರ ಪಾಸ್ ನಿಷೇಧ

ನವದೆಹಲಿ: ದೇಶದ ಪ್ರಜಾಪ್ರಭುತ್ವ ದೇಗುಲವಾದ ಸಂಸತ್ತಿನಲ್ಲಿ ಚಳಿಗಾಲದ ಅಧಿವೇಶನ ನಡೆಯುತ್ತಿದ್ದ ಸಂದರ್ಭದಲ್ಲೇ ಲೋಕಸಭೆಯಲ್ಲಿ ಇಬ್ಬರು ಅಪರಿಚಿತ ವ್ಯಕ್ತಿಗಳು ಪ್ರೇಕ್ಷಕರ ಗ್ಯಾಲರಿಯಿಂದ ಏಕಾಏಕಿ ಸದನಕ್ಕೆ ಧುಮುಕಿ ಅಶ್ರುವಾಯು ಮಾದರಿಯ (ಟಿಯರ್) ಅನಿಲ ಇದ್ದ ಕ್ಯಾನ್‌ಗಳನ್ನು ಸಿಡಿಸಿದ ಆಘಾತಕಾರಿ ಘಟನೆ ನಡೆದಿದ್ದು, ಇದರಿಂದ ಲೋಕಸಭೆಯ ಒಳಗೆ ಅಯೋಮಯ ಪರಿಸ್ಥಿತಿ ಸೃಷ್ಟಿಯಾಗಿ ಸದನವನ್ನು ಮುಂದೂಡಲಾಯಿತು. ಈ ಘಟನೆಯಿಂದ ಸಂಸತ್ ಸದಸ್ಯರು ಗಾಬರಿಗೊಂಡು ದಿಕ್ಕಾಪಾಲಾಗಿ ಓಡಿದ್ದಾರೆ. ಹೊಸ ಸಂಸತ್ ಭವನದಲ್ಲಿ ಅತ್ಯಾಧುನಿಕ ಭದ್ರತಾ ವ್ಯವಸ್ಥೆಗಳಿದ್ದರೂ ಭದ್ರತಾ ಲೋಪ ವ್ಯಕ್ತವಾಗಿರುವುದು ತೀವ್ರ ಆತಂಕಕ್ಕೆ ಎಡೆಮಾಡಿಕೊಟ್ಟಿದೆ. ತಕ್ಷಣವೇ ಭದ್ರತಾ ಸಿಬ್ಬಂದಿ ಕಾರ್ಯಪ್ರವೃತ್ತರಾಗಿ ಇಬ್ಬರನ್ನು ವಶಕ್ಕೆ ಪಡೆದಿದ್ದಾರೆ. 22 ವರ್ಷಗಳ ಹಿಂದೆ ರಾಜಧಾನಿ ದೆಹಲಿಯ ಸಂಸತ್ ಭವನದ ಮೇಲೆ ಭಯೋತ್ಪಾದಕರು ಗುಂಡಿನ ಸುರಿಮಳೆಗರೆದು ವಿಧ್ವಂಸಕ ಕೃತ್ಯ ನಡೆಸಿದ ಘಟನೆ ಸಂಭವಿಸಿತ್ತು. ಈ ದಾಳಿ ನಡೆದು 22ನೇ ವರ್ಷಾಚರಣೆ ನಡೆಯುತ್ತಿರುವ ಸಂದರ್ಭದಲ್ಲೇ ಅಪರಿಚಿತರಿಬ್ಬರು ಕಲಾಪ ನಡೆಯುತ್ತಿದ್ದ ವೇಳೆ ಲೋಕಸಭೆಯ ಸದನಕ್ಕೆ ಹಠಾತ್ತನೆ ನುಗ್ಗಿರುವ ಘಟನೆ ಆತಂಕಕ್ಕೆಡೆ ಮಾಡಿಕೊಟ್ಟಿದೆ. ಈ ಘಟನೆ ಸಂಭವಿಸುತ್ತಿದ್ದಂತೆಯೇ ಸಭಾಧ್ಯಕ್ಷರು ಕಲಾಪವನ್ನು ಮುಂದೂಡಿದ್ದಾರೆ. ಮೂಲಗಳ ಪ್ರಕಾರ ಸಂಸದ ಪ್ರತಾಪ್‌ಸಿಂಹ ಅವರ ಹೆಸರಿನಲ್ಲಿ ಸಾಗರ್ ಎಂಬುವವರು ಪಾಸ್ ಪಡೆದಿದ್ದು, ಮತ್ತೊಬ್ಬರ ಹೆಸರು ಸದ್ಯಕ್ಕೆ ಲಭ್ಯವಾಗಿಲ್ಲ. ಸದನದ ಒಳಗೆ ಧುಮುಕಿರುವ ಈ ಇಬ್ಬರು ಮೊದಲು ಪ್ರೇಕ್ಷಕರ ಗ್ಯಾಲರಿಯಲ್ಲಿ ಕುಳಿತು ಕಲಾಪ ವೀಕ್ಷಿಸುತ್ತಿದ್ದರು. ಏಕಾಏಕಿ ಪ್ರೇಕ್ಷಕರ ಗ್ಯಾಲರಿಯಿಂದ ಸದನಕ್ಕೆ ಧುಮುಕಿದ್ದು, ಸದನಗಳ ಬೆಂಚ್‌ಗಳ ಮೇಜುಗಳ ಮೇಲೆ ಓಡಾಡಿದ್ದಾ-ರೆ. ಇವರಿಬ್ಬರು ಅಶ್ರುವಾಯು ಡಬ್ಬಿಗಳನ್ನು ಸದನದ ಒಳಗೆ ಎಸೆದರು. ಇದರಿಂದ ಸದನದಲ್ಲಿ ಅಶ್ರುವಾಯು ತುಂಬಿಕೊಂಡಿತ್ತು, ಇದರ ನಡುವೆ ಒಬ್ಬ ಸಭಾಧ್ಯಕರ ಪೀಠದತ್ತ ನುಗ್ಗಲು ಪ್ರಯತ್ನ ನಡೆಸಿದ್ದು, ತಕ್ಷಣವೇ ಭದ್ರತಾ ಸಿಬ್ಬಂದಿ ಇಬ್ಬರನ್ನು ವಶಕ್ಕೆ ಪಡೆದು ಹೆಚ್ಚಿನ ಅನಾಹುತವನ್ನು ತಡೆದಿದ್ದಾರೆ. ಪ್ರೇಕ್ಷಕರ ಗ್ಯಾಲರಿಯಿಂದ ಸದನಕ್ಕೆ ನುಗ್ಗಿ ಘೋಷಣೆಗಳನ್ನು ಕೂಗಿದ್ದು, ಗದ್ದಲದಿಂದ ಏನು ಘೋಷಣೆ ಕೂಗಿದರು ಎಂಬುದು ಕೇಳಿಸಿಲ್ಲ.

**ಡ್ಯಾನಿಶ್‌ಅಲಿ** ಲೋಕಸಭೆಯ ಒಳಗೆ ಪ್ರವೇಶಿಸಿದ ವ್ಯಕ್ತಿಯ ಹೆಸರು ಸಾಗರ್ ಎಂದು ಬಿಎಸ್ಪಿಯಿಂದ ಅಮಾನತ್ತಾಗಿರುವ ಸಂಸದ ಡ್ಯಾನಿಶ್‌ಅಲಿ ಮಾಹಿತಿ ನೀಡಿದ್ದು, ಈ ವ್ಯಕ್ತಿ ಮೈಸೂರಿನ ಸಂಸದರ ಹೆಸರಿನಲ್ಲಿ ಪಾಸ್ ಪಡೆದು ಕಲಾಪ ವೀಕ್ಷಣೆಗೆ ಬಂದಿದ್ದರು ಎಂದು ಡ್ಯಾನಿಶ್‌ಅಲಿ ಖಾಸಗಿ ಸುದ್ದಿವಾಹಿನಿಗೆ ಹೇಳಿದ್ದಾರೆ.



## ಬೆಳಗಾವಿ ಅಧಿವೇಶನದಲ್ಲೂ ಪ್ರತಿಧ್ವನಿ

ಬೆಳಗಾವಿ: ಸಂಸತ್ತಿನಲ್ಲಿ ಭಾರೀ ಭದ್ರತಾ ಲೋಪವಾಗಿದ್ದು, ಇಬ್ಬರು ಅಪರಿಚಿತ ವ್ಯಕ್ತಿಗಳು ಲೋಕಸಭೆ ಕಲಾಪದ ವೇಳೆ ಹೊಗೆ ಬಾಂಬ್ ಸಿಡಿಸಿದ ಘಟನೆ ಬುಧವಾರ ವಿಧಾನಸಭೆಯಲ್ಲೂ ಪ್ರತಿಧ್ವನಿಸಿತು. ಭದ್ರತಾ ಲೋಪಕ್ಕೆ ಸಂಬಂಧಿಸಿದಂತೆ ಆಡಳಿತ ಮತ್ತು ವಿರೋಧ ಪಕ್ಷದ ಶಾಸಕರ ನಡುವೆ ತೀವ್ರ ವಾಗ್ವಾದ ನಡೆಯಿತು.

ವಿಷಯ ಪ್ರಸ್ತಾಪಿಸಿದ ಪ್ರವಾಸೋದ್ಯಮ ಸಚಿವ ಎಚ್.ಕೆ.ಪಾಟೀಲ್ ಅವರು, ಕಿಡಿಗೇಡಿಗಳ ಕೃತ್ಯವನ್ನು ಖಂಡಿಸಿದರು ಮತ್ತು ಭದ್ರತಾ ಸಂಸ್ಥೆಗಳ ಲೋಪದ ಬಗ್ಗೆ ವಿಸ್ತೃತ ತನಿಖೆಗೆ ಒತ್ತಾಯಿಸಿದರು. ವಿರೋಧ ಪಕ್ಷದ ನಾಯಕ ಆರ್.ಅಶೋಕ ಕೂಡ ಕೃತ್ಯವನ್ನು ಖಂಡಿಸಿದರು ಮತ್ತು ಚುನಾಯಿತ ಪ್ರತಿನಿಧಿಗಳ ಭದ್ರತೆ ಹಾಗೂ ಸುರಕ್ಷತೆಯ ಬಗ್ಗೆ ಕಳವಳ ವ್ಯಕ್ತಪಡಿಸಿದರು.

ಖಂಡನೆ ವ್ಯಕ್ತಪಡಿಸಿದ ಬೆನ್ನಲ್ಲೇ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು, ಹೊಗೆ ಬಾಂಬ್ ಎಸೆದ ಇಬ್ಬರು ದುಷ್ಕರ್ಮಿಗಳು ಬಿಜೆಪಿ ಸಂಸದ ಪ್ರತಾಪ್ ಸಿಂಹ ನೀಡಿದ ಪಾಸ್ ಪಡೆದು ಲೋಕಸಭೆಗೆ ನುಗ್ಗಿದ್ದಾರೆ ಎಂದು ಆರೋಪಿಸಿದರು. ಪ್ರತಾಪ್ ಸಿಂಹ ಅವರ ಹೆಸರನ್ನು ಏಕೆ ಉಲ್ಲೇಖಿಸುತ್ತಿಲ್ಲ ಎಂಬುದನ್ನು ಆರ್ ಅಶೋಕ್ ರಿಂದ ತಿಳಿದುಕೊಳ್ಳಲು ಡಿಸಿಎಂ ಬಯಸಿದ್ದರು.

## 6 ಆರೋಪಿಗಳ ಬಂಧಿಸಿದ ಪೊಲೀಸರು

ನವದೆಹಲಿ: ಸಂಸತ್ ದಾಳಿಯ 22ನೇ ವಾರ್ಷಿಕೋತ್ಸವದಂದೆ ಲೋಕಸಭೆಯಲ್ಲಿ ಪ್ರಮುಖ ಭದ್ರತಾ ಲೋಪ ನಡೆದ ಪ್ರಕರಣಕ್ಕೆ ಒಟ್ಟು ಆರು ಆರೋಪಿಗಳನ್ನು ದೆಹಲಿ ಪೊಲೀಸರು ಬಂಧಿಸಿದ್ದಾರೆ.

ಈ ಪ್ರಕರಣ ಸಂಬಂಧ ಮೊದಲು ನಾಲ್ವರನ್ನು ಪೊಲೀಸರು ಬಂಧಿಸಿದ್ದರು. ದೆಹಲಿ ಪೊಲೀಸರು ಪುರುಷ ಮತ್ತು ಮಹಿಳೆ ಇಬ್ಬರನ್ನೂ ಸಂಸತ್ ಭವನದ ಮುಂದೆ ಬಂಧಿಸಿದ್ದರೆ ಮತ್ತಿಬ್ಬರು ಸಂಸತ್ತಿನ ಒಳಗೆ ಬಂಧಿಸಲಾಗಿದೆ ಎಂದು ಡೆಪ್ಯುಟಿ ಕಮಿಷನರ್ ಆಫ್ ಪೊಲೀಸ್ (ನವದೆಹಲಿ) ಪ್ರಣವ್ ತಾಯಲ್ ಖಚಿತಪಡಿಸಿದ್ದಾರೆ.

ಸಂಸತ್ತಿನ ಹೊರಗೆ ಬಂಧಿಸಿದವರನ್ನು ಸಂಸತ್ ಸ್ಟ್ರೀಟ್ ಪೊಲೀಸ್ ಠಾಣೆಗೆ ಕರೆದೊಯ್ದು ವಿಚಾರಣೆ ನಡೆಸಿದ್ದು ಅವರು ಹರಿಯಾಣದ ಹಿಸಾರ್ ನಿವಾಸಿ ನೀಲಂ (42) ಮತ್ತು ಮಹಾರಾಷ್ಟ್ರದ ಲಾತೂರ್ ನಿವಾಸಿ ಅಮೋಲ್ ಶಿಂಧೆ (25) ಎಂದು ಗುರುತಿಸಲಾಗಿದೆ. ಮತ್ತಿಬ್ಬರನ್ನು ಉತ್ತರ ಪ್ರದೇಶದ ಸಾಗರ್ ಶರ್ಮಾ ಮತ್ತು ಮೈಸೂರಿನ ಮನೋರಂಜನ್ ಎಂದು ತಿಳಿದುಬಂದಿದೆ. ಇನ್ನು ವಿಕ್ಕಿ ಶರ್ಮಾ ಮತ್ತು ಆತನ ಪತ್ನಿಯನ್ನು ಹರಿಯಾಣದ ಹಿಸ್ಸಾರ್ ನಲ್ಲಿ ಪೊಲೀಸರು ಬಂಧಿಸಿದ್ದಾರೆ. ಆರೋಪಿಗಳು ಗುರುಗ್ರಾಮದಲ್ಲಿ ತಂಗಿದ್ದು ಕಳೆದ ಮೂರು ತಿಂಗಳಿನಿಂದ ತಯಾರಿ ನಡೆಸಿದ್ದರು ಎಂದು ಪೊಲೀಸರ ತನಿಖೆಯಲ್ಲಿ ತಿಳಿದುಬಂದಿದೆ.

## ಜಮೀರ್ ಹೇಳಿಕೆ ಖಂಡಿಸಿ ಮೇಲ್ಮನೆಯಲ್ಲಿ ಸಭಾತ್ಯಾಗ

ಬೆಳಗಾವಿ: ತೆಲಂಗಾಣ ವಿಧಾನಸಭೆ ಚುನಾವಣಾ ಪ್ರಚಾರದ ವೇಳೆ ವಸತಿ ಸಚಿವ ಜಮೀರ್ ಅಹ್ಮದ್ ಖಾನ್ ಅವರು ಸ್ಪೀಕರ್ ಸ್ಥಾನದ ಬಗ್ಗೆ ಬಿಜೆಪಿಯವರಿಗೆ ನೀಡಿದಂತಹ ವಿವಾದಾತ್ಮಕ ಹೇಳಿಕೆ ವಿಧಾನಪರಿಷತ್ನಲ್ಲಿಂದು ಭಾರೀ ಗದ್ದಲ ಉಂಟು ಮಾಡಿ ಪ್ರತಿಪಕ್ಷ ಸದಸ್ಯರು ಸಭಾತ್ಯಾಗ ನಡೆಸಿದ ಪ್ರಸಂಗ ಜರುಗಿತು.ಪ್ರಶ್ನೋತ್ತರ ಸಂದರ್ಭದಲ್ಲಿ ಕಾಂಗ್ರೆಸ್ನ ಯು.ಬಿ.ವೆಂಕಟೇಶ್ ಅವರು ವಸತಿ ಸಚಿವ ಜಮೀರ್ ಅಹ್ಮದ್ ಅವರಿಗೆ ರಾಜ್ಯದಲ್ಲಿ ಮುಂಬೈ ಕೊಳಗೇರಿ ಪುನರ್ವಸತಿ ಪ್ರಾಕಾರದ ವತಿಯಿಂದ ವಸತಿ ಸಂಕೀರ್ಣ ರಚಿಸುವ ಕುರಿತು ಪ್ರಶ್ನೆ ಕೇಳಿದರು. ಈ ವೇಳೆ ಜಮೀರ್ ಅವರು ಉತ್ತರ ನೀಡಲು ಮುಂದಾಗುತ್ತಿದ್ದಂತೆ ಈ ವೇಳೆ ಕೋಟಾ ಶ್ರೀನಿವಾಸ್ ಪೂಜಾರಿ, ನಾರಾಯಣಸ್ವಾಮಿ ಸೇರಿದಂತೆ ಮತ್ತಿತರ ಸದಸ್ಯರು ಜಮೀರ್ ವಿರುದ್ಧ ತಿರುಗಿ ಬಿದ್ದರು.ಸಭಾಪತಿ ಪೀಠಕ್ಕೆ ಅವರು ಅಗೌರವ ತೋರಿದ್ದಾರೆ ಇಂಥವರಿಂದ ಉತ್ತರ ಕೊಡಿಸುವುದು ಎಷ್ಟರ ಮಟ್ಟಿಗೆ ಸರಿ ಎಂದು ಪ್ರಶ್ನಿಸಿದರು. ಇದರಿಂದಾಗಿ ಇಡೀ ಸದನದ ಕ್ಕೇ ತಪ್ಪಿ ಹೋಯಿತು.ಸಭಾಪತಿ ಬಸವರಾಜ್ ಹೊರಟ್ಟಿ ಅವರು ಮಾಡಿದ ಪ್ರಯತ್ನ ಫಲ ನೀಡದ ಕಾರಣ ಅಂತಿಮವಾಗಿ ಸದನವನ್ನು ಎರಡು ಬಾರಿ ಮುಂದೂಡಿ ಪರಿಸ್ಥಿತಿಯನ್ನು ತಿಳಿಗೊಳಿಸುವ ಪ್ರಯತ್ನ ನಡೆಸಿದರಾದರೂ ಬಿಜೆಪಿ ಸದಸ್ಯರು ಸಭಾ ತ್ಯಾಗ ಮಾಡಿದರು. ತಮ್ಮ ಹೇಳಿಕೆಯನ್ನು ಸದನದಲ್ಲಿ ಬಲವಾಗಿ ಸಮರ್ಥಿಸಿಕೊಂಡ ಜಮೀರ್, ನಾನು ಎಲ್ಲಿಯೂ ಸಭಾಪತಿ ಸ್ಥಾನಕ್ಕೆ ಅಗೌರವ ತೋರಿಲ್ಲ. ತೋರಿಸುವುದೂ ಇಲ್ಲ. ಮುಂದೆಯೂ ಕೂಡ ಆ ರೀತಿ ನಡೆದುಕೊಳ್ಳುವುದಿಲ್ಲ.

## ಬಾಲ್ಯವಿವಾಹ ನಿಯಂತ್ರಣಕ್ಕೆ ಕಟ್ಟುನಿಟ್ಟಿನ ಕಾನೂನು ಕ್ರಮ: ಲಕ್ಷ್ಮಿ ಹೆಬ್ಬಾಳಕರ

ಬೆಳಗಾವಿ ಸುವರ್ಣವಿಧಾನಸೌಧ: ಯಾದಗಿರಿ ಸೇರಿದಂತೆ ರಾಜ್ಯದ ಯಾವುದೇ ಕಡೆಗಳಲ್ಲಿ ಬಾಲ್ಯವಿವಾಹಗಳು ಜರುಗದಂತೆ ಕಾನೂನು ಕ್ರಮ ಬಿಗಿಗೊಳಿಸಲಾಗುವುದು ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವರಾದ ಲಕ್ಷ್ಮಿ ಆರ್ ಹೆಬ್ಬಾಳಕರ ಅವರು ಹೇಳಿದರು.



ವಿಧಾನಸಭೆಯಲ್ಲಿ ಶಾಸಕರಾದ ಶರಣಗೌಡ ಕಂದಕೂರ ಅವರ ಪ್ರಶ್ನೆಗೆ ಪ್ರತಿಕ್ರಿಯಿಸಿದ ಸಚಿವರು, ನಿಷೇಧಿತ ಬಾಲ್ಯವಿವಾಹ ಪ್ರಕರಣದಲ್ಲಿ ಯಾರೇ ಭಾಗಿಯಾಗಿದ್ದರು ಸಹ ಅವರನ್ನು ರಕ್ಷಿಸುವ ಪ್ರಮೆಯೇ ಇಲ್ಲ. ತಪ್ಪಿತಸ್ಥರನ್ನು ಯಾವುದೇ ಮುಲಾಜಿಲ್ಲದೇ ಶಿಕ್ಷೆಗೆ ಗುರಿಪಡಿಸಲಾಗುವುದು ಎಂದು ತಿಳಿಸಿದರು. ಯಾದಗಿರಿ ಜಿಲ್ಲೆಯಲ್ಲಿ 2020-2021ರಲ್ಲಿ 1, 2021-22ರಲ್ಲಿ 9 ಹಾಗೂ 2022-23ರಲ್ಲಿ 2 ಪ್ರಕರಣಗಳು ದಾಖಲಾಗಿವೆ. ಈ ಬಗ್ಗೆ ಎಫ್ಐಆರ್ ದಾಖಲಾಗಿದ್ದು ನ್ಯಾಯಾಲಯಗಳಲ್ಲಿ ವಿಚಾರಣೆ ನಡೆಯುತ್ತಿದೆ. ಬಾಲ್ಯವಿವಾಹ ಸಮಾಜಕ್ಕೆ ಮಾರಕವಾಗಿ ಪರಿಣಮಿಸಿದೆ. ಬಾಲ್ಯವಿವಾಹದಿಂದ ಮುಂದೆ ಆಗುವ ದುಷ್ಪರಿಣಾಮಗಳೇನು ಎಂಬುದರ ಬಗ್ಗೆ ಸಾರ್ವಜನಿಕರು ಅರಿಯಬೇಕು. ಕಾನೂನು ಕ್ರಮಗಳನ್ನು ಪಾಲನೆ ಮಾಡಬೇಕು ಎಂದು ಸಲಹೆ ಮಾಡಿದರು. ರಾಜ್ಯದಲ್ಲಿ ಮಕ್ಕಳ ಹಕ್ಕುಗಳ ಸಂರಕ್ಷಣೆಗಾಗಿ ವಿವಿಧ ಇಲಾಖೆಗಳು ಕಾರ್ಯನಿರ್ವಹಿಸುತ್ತಿವೆ. ಮಕ್ಕಳ ಹಕ್ಕುಗಳನ್ನು ಸಂರಕ್ಷಿಸಲು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಮಕ್ಕಳ ರಕ್ಷಣಾ ನಿರ್ದೇಶನಾಲಯ, ಶಿಕ್ಷಣ ಇಲಾಖೆ, ಪೊಲೀಸ್ ಇಲಾಖೆ, ಕಾರ್ಮಿಕ ಇಲಾಖೆ ಮತ್ತಿತರ ಸಂಬಂಧಿಸಿದ ಇಲಾಖೆಗಳಲ್ಲದೇ ಸ್ಟೇಟ್ ಕ್ರೈಮ್ ರೆಕಾರ್ಡ್ ಬ್ಯೂರೋ, ಬಾಲ್ಯ ವಿವಾಹ ನಿಷೇಧ ಕೋಶ ಇತ್ಯಾದಿ ಪ್ರಾಧಿಕಾರಗಳು ಕಾರ್ಯನಿರ್ವಹಿಸುತ್ತಿದ್ದು, ಕರ್ನಾಟಕ ರಾಜ್ಯ ಮಕ್ಕಳ ರಕ್ಷಣಾ ಆಯೋಗವು ಇವುಗಳ ಮೇಲುಸ್ತುವಾರಿ ಹಾಗೂ ದಾಖಲಾಗುವ ನಿರ್ದಿಷ್ಟ ಪ್ರಕರಣಗಳಿಗೆ ಸಂಬಂಧಿಸಿದಂತೆ ಕ್ರಮಕೈಗೊಳ್ಳುತ್ತಿದೆ ಎಂದು ತಿಳಿಸಿದರು.

## ಹುಬ್ಬಳ್ಳಿ, ಬೆಳಗಾವಿ ವಿಮಾನ ನಿಲ್ದಾಣಕ್ಕೆ ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ, ವೀರರಾಣಿ ಕಿತ್ತೂರು ಚನ್ನಮ್ಮ ಹೆಸರಿಡಲು ಕೇಂದ್ರಕ್ಕೆ ಶಿಫಾರಸ್ಸು



ಬೆಳಗಾವಿ: ಸುವರ್ಣ ಸೌಧ: ಶಾಸಕರಾದ ಎನ್.ಹೆಚ್. ಕೊನರೆಡ್ಡಿ ಅವರು ವಿಧಾನಸಭೆಯಲ್ಲಿ ಶೂನ್ಯ ವೇಳೆಯಲ್ಲಿ ಪ್ರಸ್ತಾಪಿಸಿದ ವಿಷಯ ಹಾಗೂ ಶ್ರೀನಿವಾಸ ಮಾನೆ ಹಾಗೂ ಎನ್.ಹೆಚ್. ಕೊನರೆಡ್ಡಿ ನೀಡಿದ ಪತ್ರದನ್ವಯ ರಾಜ್ಯದ ಬೃಹತ್ ಕೈಗಾರಿಕಾ ಸಚಿವರಾದ ಎಂ.ಬಿ. ಪಾಟೀಲ ಅವರು ಮಾತನಾಡಿ, ವಿಮಾನ ನಿಲ್ದಾಣಗಳಿಗೆ ನಾಮಕರಣಗೊಳಿಸುವುದು ಕೇಂದ್ರ ಸರ್ಕಾರದ ವ್ಯಾಪ್ತಿಗೆ ಒಳಪಡುತ್ತದೆ. ಆದರೂ ಶಾಸಕರ ಬೇಡಿಕೆಯನ್ವಯ ಎರಡೂ ಸದನಗಳಲ್ಲಿ ಹುಬ್ಬಳ್ಳಿ ವಿಮಾನ ನಿಲ್ದಾಣಕ್ಕೆ ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಹಾಗೂ ಬೆಳಗಾವಿಯ ವಿಮಾನ ನಿಲ್ದಾಣಕ್ಕೆ ವೀರರಾಣಿ ಕಿತ್ತೂರು ಚನ್ಮಮ್ಮ ನಾಮಕರಣಗೊಳಿಸಲು ಗೊತ್ತುವಳಿ ಅಂಗೀಕರಿಸಿ ಕೇಂದ್ರಕ್ಕೆ ಶಿಫಾರಸ್ಸು ಮಾಡಲಾಗುವುದೆಂದು ಸದನದಲ್ಲಿ ಹೇಳಿದರು.

ಶಾಸಕ ಅರವಿಂದ ಬೆಲ್ಲದ ಹಾಗೂ ಬಸನಗೌಡ ಪಾಟೀಲ ಯತ್ನಾಳ ಅವರು ಈ ಸಂದರ್ಭದಲ್ಲಿ ಮಾತನಾಡಿ, ಎರಡೂ ಸದನಗಳ ಸರ್ವ ಸದಸ್ಯರ ಒಪ್ಪಿಗೆ ಇದ್ದು, ತಕ್ಷಣ ಸರ್ಕಾರವು ಈ ಕುರಿತು ಕ್ರಮವಹಿಸಬೇಕೆಂದು ಒತ್ತಾಯಿಸಿದರು.

## ಸರ್ಕಾರದ ಸೌಲಭ್ಯಗಳನ್ನು ಪಡೆದು ವಿದ್ಯಾವಂತರಾಗಿ

ಬೆಳಗಾವಿ: ಹಿಂದಿನ ಕಾಲದಲ್ಲಿ ಶಿಕ್ಷಣ ಪಡೆಯಲು ಯಾವುದೇ ಸೌಲಭ್ಯಗಳು ಇರಲಿಲ್ಲ. ಕಾಲಕ್ರಮೇಣ ಬದಲಾವಣೆಯಾದಂತೆ ಶಿಕ್ಷಣದ ಮಹತ್ವ ಅರಿವಾಯಿತು. ಸದ್ಯ ಸರಕಾರ ಈಗ ಉಚಿತ ಶಿಕ್ಷಣ, ಪಠ್ಯ ಪುಸ್ತಕ, ಸಮವಸ್ತ್ರ ಸೇರಿದಂತೆ ಅಗತ್ಯ ವಸ್ತುಗಳನ್ನು ನೀಡುತ್ತಿದ್ದು, ಎಲ್ಲರೂ ಇದರ ಸದುಪಯೋಗ ಪಡೆದುಕೊಂಡು ವಿದ್ಯಾವಂತರಾಗಬೇಕು ಎಂದು ಮಾಜಿ ಸಚಿವರಾದ ಆರ್. ವಿ.ದೇಶಪಾಂಡೆ ಅವರು ಹೇಳಿದರು.

ವಿಧಾನ ಮಂಡಳ ಚಳಿಗಾಲ ಅಧಿವೇಶನದ ಕಲಾಪ ವೀಕ್ಷಣೆಗೆ ಬುಧವಾರ (ಡಿ.13) ಆಗಮಿಸಿದ್ದ ಶಾಲಾ- ಕಾಲೇಜು ವಿದ್ಯಾರ್ಥಿಗಳನ್ನು ಉದ್ದೇಶಿಸಿ ಅವರುಮಾತನಾಡಿದರು. ರಾಜ್ಯ ಸರ್ಕಾರ ಶಿಕ್ಷಣ ಕ್ಷೇತ್ರದಲ್ಲಿ ಸಾಕಷ್ಟು ಬದಲಾವಣೆ ತಂದಿದೆ.



ದೈನಂದಿನ ಅಭ್ಯಾಸದ ಜತೆಗೆ ಮಕ್ಕಳು ಪ್ರತಿದಿನ ಪತ್ರಿಕೆ ಓದುವ ಮೂಲಕ ದೇಶ-ವಿದೇಶಗಳ ಮಾಹಿತಿ ಮತ್ತು ಸಾಮಾನ್ಯ ಜ್ಞಾನವನ್ನು ಸಹ ಬೆಳೆಸಿಕೊಳ್ಳಬೇಕು ಎಂದು ಮಕ್ಕಳಿಗೆ ಸಲಹೆ ನೀಡಿದರು.

ಬಡ ಮಕ್ಕಳು ಶಿಕ್ಷಣಕ್ಕೆ ಹೆಚ್ಚಿನ ಆದ್ಯತೆ ಕೊಟ್ಟು, ಸರಕಾರದ ವಿವಿಧ ಸೌಲಭ್ಯಗಳನ್ನು ಬಳಸಿಕೊಂಡು ಉನ್ನತ ಸ್ಥಾನ ಪಡೆಯವುದರ ಮೂಲಕ ಸಮಾಜಕ್ಕೆ ತಮ್ಮದೇ ಆದ ಕೊಡುಗೆಯನ್ನು ನೀಡಬೇಕು ಎಂದುರು.

ಬದಲಾಗುತ್ತಿರುವ ಸನ್ನಿವೇಶದಲ್ಲಿ ಪ್ರತಿಯೊಬ್ಬ ಮಕ್ಕಳು, ಚಲ, ಮನಸ್ಸು, ಇಚ್ಛಾಶಕ್ತಿ, ಏಕಾಗ್ರತೆ ಇಟ್ಟುಕೊಂಡು ಓದಿದರೆ ನಿಗದಿತ ಸಮಯಕ್ಕೆ ತಮ್ಮ ಗುರಿ ತಲುಪಲು ಸಾಧ್ಯ ಎಂದು ಆರ್ವಿ.ದೇಶಪಾಂಡೆ ಹೇಳಿದರು.

ಈ ಸಂದರ್ಭದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಉಪನಿರ್ದೇಶಕರಾದ ವಿದ್ಯಾವತಿ ಭಜಂತ್ರಿ ಮತ್ತಿತರರು ಉಪಸ್ಥಿತರಿದ್ದರು ಹಾಗೂ ವಿವಿಧ ಶಾಲಾ ಕಾಲೇಜು ವಿದ್ಯಾರ್ಥಿಗಳು ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.

## ಅತಿಥಿ ಉಪನ್ಯಾಸಕರ ಬೇಡಿಕೆ ಈಡೇರಿಕೆಗೆ ಶೀಘ್ರ ಕ್ರಮ

ಬೆಳಗಾವಿ, ಸುವರ್ಣಸೌಧ: ಕಳೆದ 15 ದಿನಗಳಿಂದ ರಾಜ್ಯಾದ್ಯಂತ ಸರಕಾರಿ ಪದವಿ ಕಾಲೇಜುಗಳ ಅತಿಥಿ ಉಪನ್ಯಾಸಕರು ಬೇಡಿಕೆ ಈಡೇರಿಕೆಗೆ ಆಗ್ರಹಿಸಿ ಪ್ರತಿಭಟನೆ ನಡೆಸುತ್ತಿದ್ದು, ಇದರಿಂದ ವಿದ್ಯಾರ್ಥಿಗಳಿಗೆ ತೊಂದರೆ ಆಗುತ್ತಿರುವುದು ಸರಕಾರದ ಗಮನಕ್ಕಿದೆ. ಶೀಘ್ರವೇ ಈ ಬಗ್ಗೆ ಕ್ರಮ ಕೈಗೊಳ್ಳಲಾಗುವುದು ಎಂದು ಉನ್ನತ ಶಿಕ್ಷಣ ಸಚಿವ ಡಾ.ಎಂ.ಸಿ.ಸುಧಾಕರ ಭರವಸೆ ನೀಡಿದರು.



ಬೆಳಗಾವಿಯಲ್ಲಿ ಬುಧವಾರ ನಡೆದ ವಿಧಾನ ಪರಿಷತ್ ಕಲಾಪದ ಶೂನ್ಯವೇಳೆಯಲ್ಲಿ ವಿಪಕ್ಷ ಸದಸ್ಯ ಚಿದಾನಂದ ಅವರು ಅತಿಥಿ ಉಪನ್ಯಾಸಕರ ಹೋರಾಟ ಮತ್ತು ವಿದ್ಯಾರ್ಥಿಗಳ ಸಮಸ್ಯೆ ಕುರಿತು ಸಚಿವರ ಗಮನಕ್ಕೆ ತಂದರು.

ಬೇರೆ ಬೇರೆ ರಾಜ್ಯಗಳಲ್ಲಿ ಅತಿಥಿ ಉಪನ್ಯಾಸಕರನ್ನು ಕಾಯಂ ಮಾಡಿಕೊಂಡಿರುವ ಮಾದರಿಯನ್ನು ಅನುಸರಿಸಬೇಕು. ಈ ವಿಷಯದಲ್ಲಿ ಪ್ರತಿ ಸಲವೂ ಉಮಾದೇವಿ ಪ್ರಕರಣವನ್ನು ಮುಂದಿಟ್ಟುಕೊಂಡು ಅತಿಥಿ ಉಪನ್ಯಾಸಕರಿಗೆ ಆಗುವ ಅನ್ಯಾಯ ನಿಲ್ಲಬೇಕಾದರೆ ವೃಂದ ಮತ್ತು ನೇಮಕಾತಿ ನಿಯಮಗಳಿಗೆ ತಿದ್ದುಪಡಿ ತರಬೇಕು. ಯುಜಿಸಿ ನಿಗದಿಯಂತೆ ವೇತನ ಪರಿಷ್ಕರಣೆ ಮಾಡಿ, ಅತಿಥಿ ಉಪನ್ಯಾಸಕರಿಗೆ ಸೇವಾಭದ್ರತೆ ಒದಗಿಸಬೇಕು ಎಂದು ಚಿದಾನಂದ ಅವರು ಸಲಹೆ ನೀಡಿದರು.

ಅತಿಥಿ ಉಪನ್ಯಾಸಕರ ಸಮಸ್ಯೆ ನಮ್ಮ ಸರಕಾರ ಅಸ್ತಿತ್ವಕ್ಕೆ ಬಂದಾಗ ಉದ್ಭವಿಸಿದ್ದಲ್ಲ. ಸುಮಾರು 20 ವರ್ಷಗಳಿಂದ ಜೀವಂತವಾಗಿರುವ ಬೇಡಿಕೆ. ಈಗಾಗಲೇ ಪ್ರತಿಭಟನಾನಿರತ ಅತಿಥಿ ಉಪನ್ಯಾಸಕರೊಂದಿಗೆ ಮಾತನಾಡಿ, ಹೋರಾಟ ಕೈ ಬಿಡುವಂತೆ ಮನವೊಲಿಸುವ ಪ್ರಯತ್ನ ವಿಫಲವಾಗಿದೆ. ಈ ಬಗ್ಗೆ ಸಿಎಂ ಜೊತೆ ಮಾತನಾಡಿದ್ದು, ಪರಿಹಾರ ಕಂಡುಕೊಂಡಿದ್ದೇವೆ. ಅದಕ್ಕೆ ಕೊಂಚ ಕಾಲಾವಕಾಶದ ಅಗತ್ಯವಿದೆ. ಶೀಘ್ರವೇ ಈ ಸಮಸ್ಯೆಯನ್ನು ಬಗೆಹರಿಸುತ್ತೇವೆ ಎಂದು ಸಚಿವರು ಸದನದಲ್ಲಿ ತಿಳಿಸಿದರು.

## ಹಳದಿ ಎಲೆ ಹಾಗೂ ಎಲೆ ಚುಕ್ಕೆ ರೋಗ ನಿವಾರಣೆಗೆ ಸೂಕ್ತ ಕ್ರಮ



ಬೆಳಗಾವಿ: ಸುವರ್ಣ ಸೌಧ : ಶಾಸಕ ಅರಗ ಜ್ಞಾನೇಂದ್ರ ಅವರು ವಿಧಾನಸಭೆಯಲ್ಲಿಂದು ಶೂನ್ಯ ವೇಳೆಯಲ್ಲಿ ಮಾತನಾಡಿ, ಮಲೆನಾಡು ಹಾಗೂ ಕರಾವಳಿ ಪ್ರದೇಶದಲ್ಲಿನ ಪ್ರಮುಖ ಬೆಳೆಯಾಗಿರುವ ಅಡಿಕೆ ಬೆಳೆಗೆ ಕೆಲವು ತಿಂಗಳುಗಳಿಂದ ಹಳದಿ ಎಲೆ ರೋಗ ಮತ್ತು ಎಲೆ ಚುಕ್ಕೆ ರೋಗ ತಗಲುತ್ತಿದೆ. ಈ ಕುರಿತು ಸರ್ಕಾರಕ್ಕೆ ಮನವಿ ಸಲ್ಲಿಸಿದ್ದು, ಸಂಶೋಧನೆಗಾಗಿ ಸರ್ಕಾರ ನೀಡಿರುವ ಅನುದಾನ ಕಡಿಮೆ ಇದ್ದು, ಇನ್ನೂ ಹೆಚ್ಚಿನ ಅನುದಾನ ನೀಡಿ ರೋಗ ನಿವಾರಣೆಗೆ ಕ್ರಮವಹಿಸಬೇಕೆಂದು ಹೇಳಿದರು.

ಇದಕ್ಕೆ ಸದನದಲ್ಲಿ ಕೃಷಿ ಸಚಿವ ಚಲುವರಾಯಸ್ವಾಮಿ ಅವರು ಉತ್ತರಿಸಿ, ಅಡಿಕೆ ಬೆಳೆಗೆ ತಗಲುತ್ತಿರುವ ಎಲೆ ಚುಕ್ಕೆ ಹಾಗೂ ಹಳದಿ ಎಲೆ ರೋಗ ನಿವಾರಣೆಗಾಗಿ ವಿಶ್ವವಿದ್ಯಾಲಯದ ವಿಜ್ಞಾನಿಗಳು ಸಂಶೋಧನೆ ಕೈಗೊಂಡಿದ್ದಾರೆ. ಈಗಾಗಲೇ ಈ ಸಂಶೋಧನಾ ಕಾರ್ಯಕ್ಕಾಗಿ 52 ಲಕ್ಷ ರೂ. ಗಳನ್ನು ಬಿಡುಗಡೆ ಮಾಡಲಾಗಿದೆ. ಸಂಶೋಧನೆಗೆ ಹೆಚ್ಚಿನ ಅನುದಾನದ ಅಗತ್ಯವಿದ್ದಲ್ಲಿ ಸರ್ಕಾರ ಬಿಡುಗಡೆ ಮಾಡಲು ಸಿದ್ಧವಿದೆ. ಈ ರೋಗಗಳ ನಿವಾರಣೆಗೆ ಸರ್ಕಾರ ಸೂಕ್ತ ಕ್ರಮವಹಿಸಿದೆ ಎಂದು ಅವರು ತಿಳಿಸಿದರು.

## ಸಕ್ಕರೆ ಕಾರ್ಖಾನೆಗಳಲ್ಲಿ ತೂಕದ ಯಂತ್ರ ಡಿಜಿಟಲೀಕರಣಕ್ಕೆ ಸೂಚನೆ

ಸುವರ್ಣ ವಿಧಾನಸೌಧ: ಕಬ್ಬಿನ ತೂಕದಲ್ಲಿ ಆಗುತ್ತಿರುವ ಮೋಸವನ್ನು ನಿಯಂತ್ರಿಸಲು ರಾಜ್ಯದ ಸಕ್ಕರೆ ಕಾರ್ಖಾನೆಗಳಲ್ಲಿನ ತೂಕದ ಯಂತ್ರಗಳ ಡಿಜಿಟಲೀಕರಣಕ್ಕೆ ಸರ್ಕಾರ ಸೂಚನೇ ನೀಡಿದ್ದು, ಈ ಸಂಬಂಧ ಕಾರ್ಖಾನೆಗಳ ಮಾಲಿಕರಿಗೆ ಹದಿನೈದು ದಿನಗಳ ಗಡುವು ನೀಡಲಾಗಿದೆ ಎಂದು ಆಹಾರ, ನಾಗರಿಕ ಪೂರೈಕೆ ಹಾಗೂ ಗ್ರಾಹಕರ ವ್ಯವಹಾರಗಳ ಇಲಾಖೆ ಸಚಿವರಾದ ಕೆ.ಎಚ್.ಮುನಿಯಪ್ಪ ತಿಳಿಸಿದರು. ಕೊಠಡಿ ಸಂಖ್ಯೆ 354ರಲ್ಲಿ ಮಂಗಳವಾರ ಸಚಿವ ಶಿವಾನಂದ ಪಾಟೀಲ, ಶಾಸಕ ಲಕ್ಷ್ಮಣ ಸವದಿ ಸೇರಿದಂತೆ ಕಬ್ಬು ಬೆಳೆಯುವ ಪ್ರದೇಶಗಳ ವ್ಯಾಪ್ತಿಯ ಜನಪ್ರತಿನಿಧಿಗಳು, ಕಾನೂನು ಮಾಪನಶಾಸ್ತ್ರ ಇಲಾಖೆ ಅಧಿಕಾರಿಗಳೊಂದಿಗೆ ಸಭೆ ನಡೆಸಿ ನಂತರ ಸುದ್ದಿಗಾರರೊಂದಿಗೆ





ಅವರು ಮಾತನಾಡಿದರು.

ಪ್ರಸಕ್ತ ಹಂಗಾಮಿನಲ್ಲಿ 78 ಸಕ್ಕರೆ ಕಾರ್ಖಾನೆಗಳು ಕಬ್ಬು ಅರೆಯುತ್ತಿವೆ. ಇದರಲ್ಲಿ 24 ಮಾತ್ರ ಡಿಜಿಟಲ್ ತೂಕದ ಯಂತ್ರಗಳನ್ನು ಅಳವಡಿಸಿಕೊಂಡಿದ್ದು, ಉಳಿದ 54 ಕಾರ್ಖಾನೆಗಳು ಮುಂದಿನ ಹದಿನೈದು ದಿನಗಳಲ್ಲಿ ಡಿಜಿಟಲ್‌ಗೆ ಪರಿವರ್ತನೆ ಆಗಬೇಕು ಎಂದು ಆಹಾರ ಮತ್ತು ನಾಗರಿಕ ಪೂರೈಕೆ ಹಾಗೂ ಕಾನೂನು ಮಾಪನಶಾಸ್ತ್ರ ಇಲಾಖೆ ಸಚಿವ ಕೆ.ಎಚ್. ಮುನಿಯಪ್ಪ ತಿಳಿಸಿದರು. ರೈತರು, ಕಾರ್ಖಾನೆಗಳಲ್ಲಿ ಕಾರ್ಯನಿರ್ವಹಿಸುವ ಕಾರ್ಮಿಕರಿಗೆ ಯಾವುದೇ ಕಾರಣಕ್ಕೂ ಮೋಸ ಆಗಬಾರದು. ರೈತರ ಗದ್ದೆಗಳಿಂದ ಲಾರಿಯಲ್ಲಿ ಎಷ್ಟು ಕಬ್ಬು ಬಂದಿರುತ್ತದೆಯೋ ಅಷ್ಟೇ ತೂಕ ಕಾರ್ಖಾನೆಗಳಲ್ಲಿ ತೂಕ ಮಾಡಿದಾಗಲೂ ಬರಬೇಕು. ಸರಿಯಾಗಿ ತೂಕ ಮಾಡದಿದ್ದರೆ, ಕಠಿಣ ಕ್ರಮ ಕೈಗೊಳ್ಳುವುದು ಅನಿವಾರ್ಯ ಆಗಲಿದೆ ಎಂದು ಎಚ್ಚರಿಸಿದರು.

ಡಿಜಿಟಲ್ ತೂಕ ಯಂತ್ರಗಳ ಅಳವಡಿಕೆಗೆ ಸಂಬಂಧಿಸಿದಂತೆ ಬೆಳಗಾವಿ ಮತ್ತು ಕಲಬುರಗಿ ಕಂದಾಯ ವಿಭಾಗಗಳ ಮಾಪನಶಾಸ್ತ್ರ ಇಲಾಖೆಯ ಜಂಟಿ ನಿರ್ದೇಶಕರು, ಉಪನಿರ್ದೇಶಕರು, ನಿಯಂತ್ರಕರು ಸೇರಿದಂತೆ ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ ಎಂದೂ ಹೇಳಿದರು.

ಪ್ರಸ್ತುತ 5 ಕೆಜಿ ಅಕ್ಕಿ ಬದಲಿಗೆ ಗ್ರಾಹಕರಿಗೆ ನಗದು ನೀಡಲಾಗುತ್ತಿದೆ. ಹಲವು ಪ್ರಯತ್ನಗಳ ನಂತರವೂ ಅಕ್ಕಿ ದೊರೆಯದ ಕಾರಣ ಹಣ ನೀಡಲಾಗುತ್ತಿದೆ. ಆಂಧ್ರಪ್ರದೇಶ ಮತ್ತು ತೆಲಂಗಾಣದೊಂದಿಗೆ ಮತ್ತೊಮ್ಮೆ ಮಾತುಕತೆ ನಡೆಸಿ, ಅಕ್ಕಿ ವಿತರಿಸಲು ಕ್ರಮ ಕೈಗೊಳ್ಳಲಾಗುವುದು ಎಂದು ಪತ್ರಕರ್ತರ ಪ್ರಶ್ನೆಗ ಪ್ರತಿಕ್ರಿಯಿಸಿದರು.

## ಅತಿಥಿ ಉಪನ್ಯಾಸಕರ ಬೇಡಿಕೆ ಈಡೇರಿಕೆಗೆ ಶೀಘ್ರ ಕ್ರಮ

ಬೆಳಗಾವಿ, ಸುವರ್ಣಸೌಧ: ಕಳೆದ 15 ದಿನಗಳಿಂದ ರಾಜ್ಯಾದ್ಯಂತ ಸರಕಾರಿ ಪದವಿ ಕಾಲೇಜುಗಳ ಅತಿಥಿ ಉಪನ್ಯಾಸಕರು ಬೇಡಿಕೆ ಈಡೇರಿಕೆಗೆ ಆಗ್ರಹಿಸಿ ಪ್ರತಿಭಟನೆ ನಡೆಸುತ್ತಿದ್ದು, ಇದರಿಂದ ವಿದ್ಯಾರ್ಥಿಗಳಿಗೆ ತೊಂದರೆ ಆಗುತ್ತಿರುವುದು ಸರಕಾರದ ಗಮನಕ್ಕಿದೆ. ಶೀಘ್ರವೇ ಈ ಬಗ್ಗೆ ಕ್ರಮ ಕೈಗೊಳ್ಳಲಾಗುವುದು ಎಂದು ಉನ್ನತ ಶಿಕ್ಷಣ ಸಚಿವ ಡಾ.ಎಂ.ಸಿ.ಸುಧಾಕರ ಭರವಸೆ ನೀಡಿದರು. ಬೆಳಗಾವಿಯಲ್ಲಿ ಬುಧವಾರ ನಡೆದ ವಿಧಾನ ಪರಿಷತ್ ಕಲಾಪದ ಶೂನ್ಯವೇಳೆಯಲ್ಲಿ ವಿಪಕ್ಷ ಸದಸ್ಯ ಚಿದಾನಂದ ಅವರು ಅತಿಥಿ ಉಪನ್ಯಾಸಕರ ಹೋರಾಟ ಮತ್ತು ವಿದ್ಯಾರ್ಥಿಗಳ ಸಮಸ್ಯೆ ಕುರಿತು ಸಚಿವರ ಗಮನಕ್ಕೆ ತಂದರು.

ಬೇರೆ ಬೇರೆ ರಾಜ್ಯಗಳಲ್ಲಿ ಅತಿಥಿ ಉಪನ್ಯಾಸಕರನ್ನು ಕಾಯಂ ಮಾಡಿಕೊಂಡಿರುವ ಮಾದರಿಯನ್ನು ಅನುಸರಿಸಬೇಕು. ಈ ವಿಷಯದಲ್ಲಿ ಪ್ರತಿ ಸಲವೂ ಉಮಾದೇವಿ ಪ್ರಕರಣವನ್ನು ಮುಂದಿಟ್ಟುಕೊಂಡು ಅತಿಥಿ ಉಪನ್ಯಾಸಕರಿಗೆ ಆಗುವ ಅನ್ಯಾಯ ನಿಲ್ಲಬೇಕಾದರೆ ವೃಂದ ಮತ್ತು ನೇಮಕಾತಿ ನಿಯಮಗಳಿಗೆ ತಿದ್ದುಪಡಿ ತರಬೇಕು. ಯುಜಿಸಿ ನಿಗದಿಯಂತೆ ವೇತನ ಪರಿಷ್ಕರಣೆ ಮಾಡಿ, ಅತಿಥಿ ಉಪನ್ಯಾಸಕರಿಗೆ ಸೇವಾಭದ್ರತೆ ಒದಗಿಸಬೇಕು ಎಂದು ಚಿದಾನಂದ ಅವರು ಸಲಹೆ ನೀಡಿದರು.

ಅತಿಥಿ ಉಪನ್ಯಾಸಕರ ಸಮಸ್ಯೆ ನಮ್ಮ ಸರಕಾರ ಅಸ್ತಿತ್ವಕ್ಕೆ ಬಂದಾಗ ಉದ್ಭವಿಸಿದ್ದಲ್ಲ. ಸುಮಾರು 20 ವರ್ಷಗಳಿಂದ ಜೀವಂತವಾಗಿರುವ ಬೇಡಿಕೆ. ಈಗಾಗಲೇ ಪ್ರತಿಭಟನಾನಿರತ ಅತಿಥಿ ಉಪನ್ಯಾಸಕರೊಂದಿಗೆ ಮಾತನಾಡಿ, ಹೋರಾಟ ಕೈ ಬಿಡುವಂತೆ ಮನವೊಲಿಸುವ ಪ್ರಯತ್ನ ವಿಫಲವಾಗಿದೆ. ಈ ಬಗ್ಗೆ ಸಿಎಂ ಜೊತೆ ಮಾತನಾಡಿದ್ದು, ಪರಿಹಾರ ಕಂಡುಕೊಂಡಿದ್ದೇವೆ. ಅದಕ್ಕೆ ಕೊಂಚ ಕಾಲಾವಕಾಶದ ಅಗತ್ಯವಿದೆ. ಶೀಘ್ರವೇ ಈ ಸಮಸ್ಯೆಯನ್ನು ಬಗೆಹರಿಸುತ್ತೇವೆ ಎಂದು ಸಚಿವರು ಸದನದಲ್ಲಿ ತಿಳಿಸಿದರು.

## ಪರಿಷತ್‌ನಲ್ಲಿ ನಾಲ್ಕು ವಿಧೇಯಕಗಳಿಗೆ ಅಂಗೀಕಾರ

ಬೆಳಗಾವಿ ಸುವರ್ಣಸೌಧ: ಕರ್ನಾಟಕ ಸರಕು ಮತ್ತು ಸೇವೆಗಳ ತೆರಿಗೆ (ಎರಡನೇ ತಿದ್ದುಪಡಿ) ವಿಧೇಯಕ–2023, ಕರಾವಳಿ ಅಭಿವೃದ್ಧಿ ಮಂಡಳಿ ವಿಧೇಯಕ–2023 ಸೇರಿದಂತೆ ವಿಧಾನಸಭೆಯಿಂದ ಅಂಗೀಕೃತ ರೂಪದಲ್ಲಿರುವ ನಾಲ್ಕು ವಿವಿಧ ವಿಧೇಯಕಗಳಿಗೆ ವಿಧಾನ ಪರಿಷತ್‌ನಲ್ಲಿ ಡಿಸೆಂಬರ್ 13ರಂದು ಅಂಗೀಕಾರ ದೊರೆಯಿತು

ವಿಧಾನಸಭೆಯಿಂದ ಅಂಗೀಕೃತ ರೂಪದಲ್ಲಿರುವ 2023ನೇ ಸಾಲಿನ ಕರ್ನಾಟಕ ಸರಕು ಮ್ತು ಸೇವೆಗಳ ತೆರಿಗೆ (ಎರಡನೇ ತಿದ್ದುಪಡಿ) ವಿಧೇಯಕವನ್ನು ಪರ್ಯಾಯಲೋಸಲು ಮುಖ್ಯಮಂತ್ರಿಗಳ ಪರವಾಗಿ ಕಂದಾಯ ಸಚಿವರಾದ ಕೃಷ್ಣ ಭೈರೇಗೌಡ ಅವರು ಕೋರಿದರು.

2023ನೇ ಸಾಲಿನ ಕರ್ನಾಟಕ ವೈದ್ಯಕೀಯ ಕೋರ್ಸುಗಳನ್ನು ಪೂರ್ಣಗೊಳಿಸಿದ ಅಭ್ಯರ್ಥಿಗಳ ಕಡ್ಡಾಯ ಸೇವಾ (ತಿದ್ದುಪಡಿ) ವಿಧೇಯಕಕ್ಕೆ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರಾದ ದಿನೇಶ್ ಗುಂಡೂರಾವ್ ಅವರು ವಿಧೇಯಕವನ್ನು ಪರ್ಯಾಲೋಸಬೇಕೆಂದು ಕೋರಿದರು. 2023ನೇ ಸಾಲಿನ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ತಿದ್ದುಪಡಿ ವಿಧೇಯಕವನ್ನು ಪರ್ಯಾಯಲೋಚಿಸಲು ಸಚಿವರಾದ ಪ್ರಿಯಾಂಕ್ ಖರ್ಗೆ ಅವರು ಕೋರಿದರು. ಅದೇ ರೀತಿ 2023ನೇ ಸಾಲಿನ ಕರಾವಳಿ ಅಭಿವೃದ್ಧಿ ಮಂಡಳಿ ವಿಧೇಯಕ–2023ನ್ನು ಪರ್ಯಾಯಲೋಚಿಸಲು ಯೋಜನೆ ಮತ್ತು ಸಾಂಖ್ಯಿಕ ಸಚಿವರಾದ ಡಿ.ಸುಧಾಕರ್ ಅವರು ಕೋರಿದರು.

ಸಭಾಪತಿಗಳಾದ ಬಸವರಾಜ ಹೊರಟ್ಟಿ ಅವರು ಈ ವಿಧೇಯಕಗಳ ಮೇಲೆ ಚರ್ಚೆಗೆ ಅವಕಾಶ ಕಲ್ಪಿಸಿದರು. ಚರ್ಚೆಯ ಬಳಿಕ ಸಭಾಪತಿಗಳು ಪ್ರಸ್ತಾವವನ್ನು ಮತಕ್ಕೆ ಹಾಕಿದರು. ಸದನ ಸದಸ್ಯರು ಪ್ರಸ್ತಾವಕ್ಕೆ ಒಪ್ಪಿಗೆ ಸೂಚಿಸಿದರು. ಸಚಿವರು, ವಿಧೇಯಕಗಳನ್ನು ಅಂಗೀಕರಿಸಲು ಕೋರಿದ ಬಳಿಕ ಸಭಾಪತಿಯವರು ಈ ವಿಧೇಯಕಗಳ ಅಂಗೀಕಾರಕ್ಕೆ ವಿಧಾನ ಪರಿಷತ್‌ನಿಂದ ಅನುಮೋದನೆ ದೊರೆತಿದೆ ಎಂದು ಘೋಷಿಸಿದರು.

## ವಿಧಾನಸಭೆಯಲ್ಲಿ ವಿವಿಧ ಮಸೂದೆಗಳ ಅಂಗೀಕಾರ

ಬೆಳಗಾವಿ: ಸುವರ್ಣ ಸೌಧ: ವಿಧಾನಸಭೆಯ ಅಧಿವೇಶನದಲ್ಲಿ ಇಂದು ವಿವಿಧ ಮಸೂದೆಗಳಿಗೆ ಸದನದ ಅಂಗೀಕಾರ ನೀಡಲಾಯಿತು. ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಮಂಡಿಸಿದ 2023ನೇ ಸಾಲಿನ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಮತ್ತು ಕೆಲವು ಇತರ ಕಾನೂನು (ತಿದ್ದುಪಡಿ) ವಿಧೇಯಕ, ಸಾರಿಗೆ ಮತ್ತು ಮುಜರಾಯಿ ಸಚಿವರಾದ ರಾಮಲಿಂಗಾರೆಡ್ಡಿ ಅವರು ಮಂಡಿಸಿದ 2023ನೇ ಸಾಲಿನ ಕರ್ನಾಟಕ ಹಿಂದೂ ಧಾರ್ಮಿಕ ಸಂಸ್ಥೆಗಳು ಮತ್ತು ಧರ್ಮಾದಾಯ ದತ್ತಿಗಳ (ತಿದ್ದುಪಡಿ) ವಿಧೇಯಕ ಹಾಗೂ 2023ನೇ ಸಾಲಿನ ಕರ್ನಾಟಕ ಮೋಟಾರು ವಾಹನಗಳ ತೆರಿಗೆ ನಿರ್ಧರಣೆ (2ನೇ ತಿದ್ದುಪಡಿ) ವಿಧೇಯಕವನ್ನು ಅಂಗೀಕರಿಸಲಾಯಿತು.

ಗೃಹ ಸಚಿವ ಡಾ. ಜಿ. ಪರಮೇಶ್ವರ ಅವರು ಮಂಡಿಸಿದ 2023ನೇ ಸಾಲಿನ ಕರ್ನಾಟಕ ಸಾರ್ವಜನಿಕ ಪರೀಕ್ಷೆ (ನೇಮಕಾತಿಯಲ್ಲಿನ ಭ್ರಷ್ಟಾಚಾರ ಮತ್ತು ಅನುಚಿತ ವಿಧಾನಗಳ ಪ್ರತಿಬಂಧಕ ಕ್ರಮಗಳು) ವಿಧೇಯಕವನ್ನು, ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವ ಹೆಚ್.ಕೆ. ಪಾಟೀಲ ಅವರು ಮಂಡಿಸಿದ 2023ನೇ ಸಾಲಿನ ಕರ್ನಾಟಕ ಉಚ್ಚ ನ್ಯಾಯಾಲಯ (ತಿದ್ದುಪಡಿ) ವಿಧೇಯಕ, 2023ನೇ ಸಾಲಿನ ಕರ್ನಾಟಕ ಸಿವಿಲ್ ನ್ಯಾಯಾಲಯಗಳ (ತಿದ್ದುಪಡಿ) ವಿಧೇಯಕ, 2023ನೇ ಸಾಲಿನ ಶ್ರೀ ರೇಣುಕಾ ಯಲ್ಲಮ್ಮ ಕ್ಷೇತ್ರ ಪ್ರವಾಸೋದ್ಯಮ ಅಭಿವೃದ್ಧಿ ವಿಧೇಯಕ, 2023ನೇ ಸಾಲಿನ ಸಾರ್ವಜನಿಕ ಸಂಗ್ರಹಣೆಗಳ ಪಾರದರ್ಶಕತೆ (ಎರಡನೇ ತಿದ್ದುಪಡಿ) ವಿಧೇಯಕ, ಹಾಗೂ ಮತ್ತು ನಗರಾಭಿವೃದ್ಧಿ ಮತ್ತು ನಗರ ಯೋಜನಾ ಸಚಿವ ಬಿ.ಎಸ್. ಸುರೇಶ ಅವರ ಪರವಾಗಿ ಮಂಡಿಸಿದ 2023ನೇ ಸಾಲಿನ ಹಂಪಿ ವಿಶ್ವ ಪರಂಪರೆ ಪ್ರದೇಶ ನಿರ್ವಹಣಾ ಪ್ರಾಧಿಕಾರ (ತಿದ್ದುಪಡಿ) ವಿಧೇಯಕ, ಸಮಾಜ ಕಲ್ಯಾಣ ಸಚಿವ ಎಚ್.ಸಿ. ಮಹಾದೇವಪ್ಪ ಅವರು ಮಂಡಿಸಿದ 2023ನೇ ಸಾಲಿನ ಕರ್ನಾಟಕ ಅನುಸೂಚಿತ ಜಾತಿಗಳ ಉಪ ಹಂಚಿಕೆ ಮತ್ತು ಬುಡಕಟ್ಟು ಉಪ ಹಂಚಿಕೆ (ಹಂಚಿಕೆ ಮಾಡಬಹುದಾದ ಆಯವ್ಯಯ ರೂಪಿಸುವುದು, ಆರ್ಥಿಕ ಸಂಪನ್ಮೂಲಗಳ ಹಂಚಿಕೆ ಮತ್ತು ಬಳಕೆ) (ತಿದ್ದುಪಡಿ) ವಿಧೇಯಕಗಳನ್ನು ಸದನದಲ್ಲಿ ಅಂಗೀಕರವಾಯಿತು. ಈ ವಿಧೇಯಕಗಳು ವಿಧಾನ ಪರಿಷತ್‌ನಲ್ಲಿ ಚರ್ಚೆಗೆ ಬರಲಿವೆ.

# ಪಂಚಮಸಾಲಿ ಸಮಾಜದಿಂದ ಬೃಹತ್ ಪ್ರತಿಭಟನೆ

ಬೆಳಗಾವಿ: ಪಂಚಮಸಾಲಿ ಸಮುದಾಯಕ್ಕೆ 2ಎ ಮೀಸಲಾತಿ ನೀಡುವಂತೆ ಒತ್ತಾಯಿಸಿ ಕೂಡಲಸಂಗಮ ಲಿಂಗಾಯತ ಪಂಚಮಸಾಲಿ ಪೀಠದ ಬಸವಜಯ ಮೃತ್ಯುಂಜಯ ಸ್ವಾಮೀಜಿ ನೇತೃತ್ವದಲ್ಲಿ ಬುಧವಾರ ನಗರದ ಚನ್ನಮ್ಮ ವೃತ್ತದಲ್ಲಿ ಬೃಹತ್ ಪ್ರತಿಭಟನೆ ನಡೆಸಲಾಯಿತು. ಪ್ರತಿಭಟನೆಯಲ್ಲಿ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಮಾತನಾಡಿ, ಕಾಂಗ್ರೆಸ್ ಸರ್ಕಾರ ಬಂದು ಏಳು ತಿಂಗಳಾದರೂ ಸಮಾಜಕ್ಕೆ 2 ಎ ಮೀಸಲಾತಿ ಸಿಕ್ಕಿಲ್ಲ. ಪಂಚಮಸಾಲಿ ಸಮಾಜಕ್ಕೆ 2ಎ ಮೀಸಲಾತಿ ಬೇಕು ಎಂದು ಆಗ್ರಹಿಸಿದ್ದಾರೆ. ಸರ್ಕಾರ ಶೀಘ್ರವೇ ಪಂಚಮಸಾಲಿ ಸಮಾಜಕ್ಕೆ ಮೀಸಲಾತಿ ನೀಡಲಿ. ಇಲ್ಲದಿದ್ದರೆ ಮಹಾರಾಷ್ಟ್ರದಲ್ಲಿ ಮರಾಠ ಮೀಸಲಾತಿಗಾಗಿ ನಡೆದ ಹೋರಾಟದ ಮಾದರಿಯಲ್ಲಿ ಹೋರಾಟ ಮಾಡುತ್ತೇವೆ ಎಂದು ಎಚ್ಚರಿಕೆ ನೀಡಿದರು. ಯಾವುದೇ ರಾಜಕೀಯ ಆಸೆ ಆಮೀಷಗಳಿಗೆ ಬಗ್ಗದೆ ಸಮಾಜದ ಮೀಸಲಾತಿಗಾಗಿ ಸ್ವಾಮೀಜಿ ಹೋರಾಟ ಮಾಡಿಕೊಂಡು ಬಂದಿದ್ದಾರೆ. ಹಳ್ಳಿ ಹಳ್ಳಿಗಳಲ್ಲಿ ಲಿಂಗ ಪೂಜೆ ಮಾಡಿಕೊಂಡು ಹೋರಾಟ ಮಾಡಿದ್ದಾರೆ ಎಂದು ಕೂಡಲಸಂಗಮ ಸ್ವಾಮೀಜಿಯ ಬಗ್ಗೆ ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ. ಬಿಜೆಪಿ ಸರ್ಕಾರ ಇದ್ದಾಗಲೂ ಕೂಡ ನಾನು ಹೋರಾಟ ಮಾಡಿದ್ದೇನೆ. ಯಾವುದೇ ಸರ್ಕಾರ ಇದ್ದರೂ ನಾನು ಹೋರಾಟ ಮಾಡುತ್ತೇನೆ.



ಅಧಿವೇಶನ ಮುಗಿದ ಬಳಿಕ ಬೆಂಗಳೂರಿಗೆ ಹೋಗಿ ರಾಜ್ಯ ಹಿಂದುಳಿದ ಆಯೋಗದ ಅಧ್ಯಕ್ಷರು ಸಂಬಂಧಿಸಿದ ಅಧಿಕಾರಿಗಳ ಜೊತೆಗೆ ಚರ್ಚೆ ಮಾಡುವುದಾಗಿ ಸಿಎಂ ಸಿದ್ದರಾಮಯ್ಯ ಹೇಳಿದ್ದಾರೆ. ಸಾಧಕ ಭಾದಕಗಳ ಬಗ್ಗೆ ಚರ್ಚೆ ಮಾಡಿದ ನಂತರ ಮುಂದಿನ ತೀರ್ಮಾನ ತೆಗೆದುಕೊಳ್ಳುವೆ ಎಂದಿದ್ದಾರೆ. ಈ ವಿಚಾರವಾಗಿ ಒಂದು ವಾರಗಳ ಕಾಲ ಸಮಯ ನೀಡಿ ಎಂದು ಸಿದ್ದರಾಮಯ್ಯ ಕೇಳಿದ್ದಾರೆ. ಇಷ್ಟು ವರ್ಷಗಳ ಕಾಲ ಕಾಯ್ದಿದ್ದೇವೆ ಇನ್ನೊಂದು ವಾರ ಕಾಯೋಣ. ಒಂದು ವಾರಗಳ ಅವಧಿ ಒಳಗೆ ಸಿಎಂ ಸಮಗ್ರವಾಗಿ ಚರ್ಚೆ ಮಾಡಲಿ. ಅಲ್ಲಿಯವರೆಗೆ ನಮ್ಮ ಸಮಾಜದವರು ಶಾಂತ ರೀತಿಯಿಂದ ಇರೋಣ ಎಂದು ಹೇಳಿದರು. ಜಯಮೃತ್ಯುಂಜಯ ಸ್ವಾಮೀಜಿ ಮಾತನಾಡಿ, ಕಳೆದ ಮೂರು ವರ್ಷದಿಂದ ಮೀಸಲಾತಿ ಕೋರಿ ವಿವಿಧ ಹಂತದ ಹೋರಾಟ ನಡೆಸಲಾಗಿದೆ. ಈಗ ಸಾಮೂಹಿಕ ಇಷ್ಟಲಿಂಗ ಪೂಜೆ ಮೂಲಕ ಹೋರಾಟ ನಡೆಸಲಾಗುತ್ತಿದೆ. ಎಲ್ಲಿಯೂ ದೇವರ ಪೂಜೆಯ ಮೂಲಕ ಹೋರಾಟ ನಡೆಸಿಲ್ಲ. ಲಿಂಗಾಯತ ಪಂಚಮಸಾಲಿ ಸಮಾಜದವರು ಶಾಂತಿ ಪ್ರಿಯರು. ಹಾಗಾಗಿ ದೇವರ ಪೂಜೆ ಮೂಲಕ ಹೋರಾಟ ನಡೆಸಲಾಗುತ್ತಿದೆ.

ಕಾಂಗ್ರೆಸ್ ಸರ್ಕಾರ ಮೀಸಲಾತಿ ನೀಡದೆ ಹೋದಲ್ಲಿ ಮುಂದಿನ ಲೋಕಸಭಾ ಚುನಾವಣೆಯಲ್ಲಿ ವ್ಯತಿರಿಕ್ತ ಪರಿಣಾಮ ಎದುರಿಸಬೇಕಾಗುತ್ತದೆ ಎಂದು ಎಚ್ಚರಿಸಿದರು. ಬೆಳಗಾವಿ ಜಿಲ್ಲೆಯ ಜನರ ಒತ್ತಾಯಕ್ಕೆ ಮತ್ತೆ ಹೋರಾಟ ಶುರು ಮಾಡಿದ್ದೇವೆ. ಮೀಸಲಾತಿ ಸಿಗುವವರೆಗೂ ಹೋರಾಟ ಬಿಡಲ್ಲ. ಯಡಿಯೂರಪ್ಪ ಇದ್ದಾಗ, ಬೊಮ್ಮಾಯಿ ಇದ್ದಾಗ ಹೋರಾಟ ಮಾಡಿದ್ದೇವು. ಈಗ ಸಿದ್ದರಾಮಯ್ಯ ಇದ್ದಾಗ ಹೋರಾಟ ಮಾಡಿ ಅಂತಾ ಜನ ಹೇಳಿದ್ದಾರೆ. ನಿನ್ನೆ ಚರ್ಚೆ ಬಳಿಕ ಸಿಎಂ ಜತೆಗೆ ಮಾತಾಡಿದ್ದನ್ನ ಇಲ್ಲಿ ಹೇಳ್ತಿದ್ದೇನೆ. ಅಡ್ವೋಕೇಟ್ ಜನರಲ್ ಜತೆಗೆ ಮೀಟಿಂಗ್ ಕರೆಯುತ್ತೇನೆ ಅಂತಾ ಸಿಎಂ ಹೇಳಿದ್ದರು ಎಂದರು.

ಪ್ರತಿಭಟನೆ ವೇಳೆ ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಮಾತನಾಡಿ, ಬೆಳಗಾವಿ: ತಾಂತ್ರಿಕ ಮಾಹಿತಿಗಳನ್ನು ಪಡೆದು, ಒಂದು ವಾರದೊಳಗಾಗಿ ಪಂಚಮಸಾಲಿ ಮುಖಂಡರ ಸಭೆ ಕರೆದು, ಮತ್ತೊಮ್ಮೆ ಮಾತನಾಡುವುದಾಗಿ ಮುಖ್ಯಮಂತ್ರಿಗಳು ಭರವಸೆ ನೀಡಿದ್ದಾರೆ. ನಮ್ಮ ಬೇಡಿಕೆ ಈಡೇರುವವರೆಗೂ ಶಾಂತಿಯುತವಾದ ಹೋರಾಟವನ್ನು ಕೈಬಿಡುವ ಪ್ರಶ್ನೆಯೇ ಇಲ್ಲ ಎಂದು ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ತಿಳಿಸಿದರು. ಕಳೆದ 3 ವರ್ಷಗಳಿಂದ ನಿರಂತರವಾಗಿ ನಾವು ಹೋರಾಟ ಮಾಡುತ್ತಾ ಬಂದಿದ್ದೇವೆ. ದೇಶಕ್ಕೆ ಸ್ವಾತಂತ್ರ್ಯ ಸಿಗಲು ಕೂಡ ಸುಧೀರ್ಘ ಹೋರಾಟ ನಡೆದಿದೆ. ಏನನ್ನಾದರೂ ಪಡೆಯಬೇಕಾದರೆ ನಾವು ಹೋರಾಟ ಮಾಡಿಯೇ ಪಡೆಯಬೇಕಾಗಿದೆ. ಹೋರಾಟ ನಮ್ಮ ರಕ್ತದಲ್ಲೇ ಬಂದಿದೆ ಎಂದು ಅವರು ಹೇಳಿದರು. ನಾವು ಪಂಚಮಸಾಲಿ ಮಂತ್ರಿಗಳು ಹಾಗೂ ಶಾಸಕರು ಹಲವು ಬಾರಿ ಮುಖ್ಯಮಂತ್ರಿಗಳನ್ನು ಭೇಟಿಯಾಗಿದ್ದೇವೆ. ನಿನ್ನೆ ಕೂಡ ಭೇಟಿಯಾಗಿ ಮಾತನಾಡಿದ್ದೇವೆ. ವಾರದೊಳಗಾಗಿ ಹಿಂದುಳಿದ ವರ್ಗಗಳ ಆಯೋಗದ ಜತೆ ಚರ್ಚಿಸಿ, ಪಂಚಮಸಾಲಿ ಪ್ರಮುಖರ ಸಭೆ ಕರೆಯುವುದಾಗಿ ಮುಖ್ಯಮಂತ್ರಿಗಳು ತಿಳಿಸಿದ್ದಾರೆ. ನಾವು ಯಾರ ಪಾಲನ್ನೂ ಕೇಳುತ್ತಿಲ್ಲ, ಬೇರೆಯವರಿಗೆ ಕೊಡಲು ನಮ್ಮ ಅಭ್ಯಂತರವಿಲ್ಲ ನಮಗೆ ನ್ಯಾಯಯುತವಾಗಿ ಸಿಗಬೇಕಾದದ್ದನ್ನು ಮಾತ್ರ ಕೇಳುತ್ತಿದ್ದೇವೆ ಎಂದು ಅವರು ತಿಳಿಸಿದರು. ಸಚಿವ ಶಿವಾನಂದ ಪಾಟೀಲ್ ಮಾತನಾಡಿ, ಸರ್ಕಾರಕ್ಕೆ ನಿರ್ದಾಕ್ಷಿಣ್ಯವಾಗಿ 2 ಎ ಮೀಸಲಾತಿ ನೀಡಬೇಕು. ಪೂಜ್ಯರಲ್ಲಿ ನೇತೃತ್ವದಲ್ಲಿ ಸರ್ಕಾರದ ಜತೆ ಚರ್ಚೆ ಮಾಡಲಾಗಿದೆ. ಸಿಎಂ ಅವರು ಸಹಮತಿಯನ್ನು ತಿಳಿಸಿದ್ದಾರೆ ಎಂದರು.

ಪ್ರತಿಭಟನೆಯಲ್ಲಿ ಶಾಸಕ ವಿಜಯಾನಂದ ಕಾಶಪ್ಪನವರ ಸೇರಿದಂತೆ ಸಾವಿರಾರೂ ಸಂಖ್ಯೆಯಲ್ಲಿ ಲಿಂಗಾಯತ ಪಂಚಮಸಾಲಿ ಸಮಾಜದ ಬಾಂಧವರು ಭಾಗವಹಿಸಿದ್ದರು.

## ಅಧಿವೇಶನದ ನಡುವೆಯೂ ಸರ್ಕಾರಿ ಶಾಲೆಗಳಿಗೆ ಸಚಿವ ಮಧು ಬಂಗಾರಪ್ಪ ಭೇಟಿ

### ವಿದ್ಯಾರ್ಥಿಗಳ ಸಮಸ್ಯೆ ಆಲಿಸಿ ಭರವಸೆ ಈಡೇರಿಸಿದ ಶಿಕ್ಷಣ ಸಚಿವರು

ಬೆಳಗಾವಿ: ನಗರದಲ್ಲಿ ನಡೆಯುತ್ತಿರುವ ಚಳಿಗಾಲದ ಅಧಿವೇಶನದ ನಡುವೆಯೂ ಸರ್ಕಾರಿ ಶಾಲೆಗಳಿಗೆ ಶಾಲಾ ಮತ್ತು ಸಾಕ್ಷರತಾ ಇಲಾಖೆ ಸಚಿವ ಎಸ್ ಮಧು ಬಂಗಾರಪ್ಪ ಅವರು ಭೇಟಿ ನೀಡಿ, ಮಕ್ಕಳ ಸಮಸ್ಯೆಗಳಿಗೆ ಧನಿಯಾಗಿದ್ದಾರೆ. ಇಂದು ಬೆಳಿಗ್ಗೆ ನಗರದ ಖಂಜರಗಲ್ಲಿ, ವೀರಭದ್ರ ನಗರದ ಉರ್ದು ಶಾಲೆ, ಸರ್ದಾರ್ ಪ್ರೌಢಶಾಲೆ ಹಾಗೂ ಕಿತ್ತೂರು ತಾಲ್ಲೂಕಿನ ಹುಲಿಕಟ್ಟಿ ಮತ್ತು ಕಾದರವಳ್ಳಿ ಶಾಲೆಗೆ ಭೇಟಿ ನೀಡಿದರು. ಶತಮಾನ ಕಂಡಿರುವ ಖಂಜರಗಲ್ಲಿಯಲ್ಲಿರುವ ಉರ್ದು ಶಾಲೆಯಲ್ಲಿ ಮಕ್ಕಳೊಂದಿಗೆ ಪ್ರಾರ್ಥನೆಯಲ್ಲಿ ಪಾಲ್ಗೊಂಡು, ಸಂವಿಧಾನ ಪೀಠಿಕೆ ಓದುವಿಕೆಯನ್ನು ನೋಡಿ ಸಂತಸ ವ್ಯಕ್ತಪಡಿಸಿದರು. ನಿತ್ಯ ಶಾಲಾ ಮಕ್ಕಳಿಗೆ ವಿದ್ಯಾರ್ಥಿನಿಯರಿಗೆ ಕ್ಷೀರಭಾಗ್ಯ ಯೋಜನೆಯಡಿಯ ಬಿಸಿ ಹಾಲು ವಿತರಿಸಿ, ಸದೃಢವಾದ ಆರೋಗ್ಯದಿಂದರಲು ತಿಳಿಸಿದರು. ಇನ್ನು ವೀರಭದ್ರನಗರದಲ್ಲಿ ನ ಉರ್ದು ಶಾಲೆಯಲ್ಲಿ 1 ರಿಂದ 7 ನೇ ತರಗತಿಯವರೆಗೆ 254 ವಿದ್ಯಾರ್ಥಿಗಳು ಓದುತ್ತಿರುವುದನ್ನು ಕಂಡು ಸಂತಸ ವ್ಯಕ್ತಪಡಿಸಿದರು. ಶಾಲೆಯಲ್ಲಿ ಮಕ್ಕಳಿಗೆ ಸಿಗುತ್ತಿರುವ ಸೌಲಭ್ಯಗಳನ್ನು ಪರಿಶೀಲಿಸಿ, ಶಾಲೆಗೆ ಕೂಡಲೇ ಬೆಂಚ್ ಗಳನ್ನು ಒದಗಿಸುವುದಾಗಿ ಭರವಸೆ ನೀಡಿದರು. ಈ ವೇಳೆ ಇದೇ ಶಾಲೆಯಲ್ಲಿ ಪ್ರೌಢಶಾಲೆ ಆರಂಭಿಸಬೇಕು ಎನ್ನುವ ಪೋಷಕರ ಪ್ರಶ್ನೆ ಸಕಾರಾತ್ಮಕವಾಗಿ ಸ್ಪಂದಿಸಿ, ಸ್ಥಳೀಯ ಶಾಸಕರಿಗೆ ಶಾಲೆಯ ಸಮಗ್ರ ಮಾಹಿತಿ



ಸಂಗ್ರಹಿಸಿ, ಸಚಿವರಿಗೆ ನೀಡಲು ಸಲಹೆ ನೀಡಿದರು.

ಅಲ್ಲದೇ ಇದೇ ವೇಳೆ 173 ವರ್ಷ ಪೂರೈಸಿರುವ ಸರದಾರ ಶಾಲೆಗೆ ಭೇಟಿ ನೀಡಿ, ಬ್ರಿಟಿಷ ಶೈಲಿಯ ಕಟ್ಟಡ ಹೊಂದಿರುವುದನ್ನು ಗಮನಿಸಿ, ಶಾಲೆಯಲ್ಲಿನ ವಿದ್ಯಾರ್ಥಿಗಳೊಂದಿಗೆ ಶೈಕ್ಷಣಿಕ ಚಟುವಟಿಕೆಗಳ ಬಗ್ಗೆ ಸಂವಾದ ನಡೆಸಿದರು. ಇಂತಹ ಪಾರಂಪರಿಕ ಶಾಲೆಗಳನ್ನು ಗುರುತಿಸುವಂತೆ ಅಧಿಕಾರಿಗಳಿಗೆ ಸೂಚಿಸಿದರು.

**ಬಿಸಿಯೂಟ ಸವಿದು ಮಕ್ಕಳಿಗೆ ನೀಡಿದ್ದ ಭರವಸೆ ಈಡೇರಿಸಿದ ಸಚಿವರು** : ಅಧಿವೇಶನ ವೀಕ್ಷಣೆಗೆ ತೆರಳಿದ್ದ ಕಿತ್ತೂರು ತಾಲ್ಲೂಕಿನ ಹುಲಿಕಟ್ಟಿ ಗ್ರಾಮದ ಮಕ್ಕಳನ್ನು ಭೇಟಿ ಮಾಡಿದ್ದ ಸಚಿವ ಮಧು ಬಂಗಾರಪ್ಪ ಅವರು, ಅಧಿವೇಶನ ಮುಗಿಯುವ ನಡುವೆ ನಿಮ್ಮ ಶಾಲೆಗೆ ಬರುತ್ತೇನೆ. ನಿಮ್ಮ ಶಾಲೆಯಲ್ಲಿಯೇ ನಿಮ್ಮನ್ನು ಭೇಟಿ ಮಾಡಿ, ತಿನಿಮ್ಮ ಶಾಲೆಯಲ್ಲಿ ನೀಡುವ ಬಿಸಿಯೂಟವನ್ನು ಮಾಡೋಣ ಎಂದು ಭರವಸೆ ನೀಡಿದ್ದರು. ಅದರಂತೆ ಶಿಕ್ಷಣ ಸಚಿವರು, ಹುಲಿಕಟ್ಟಿ ಗ್ರಾಮದ ಸರ್ಕಾರಿ ಶಾಲೆಗೆ ತೆರಳಿ ಮಕ್ಕಳ ಜೊತೆ ಕುಳಿತು ಊಟ ಮಾಡುವ ಮೂಲಕ ಮಕ್ಕಳಿಗೆ ನೀಡಿದ್ದ ಭರವಸೆ ಈಡೇರಿಸಿದ್ದಾರೆ. ಈ ಸಂದರ್ಭದಲ್ಲಿ ಜಂಟಿ ನಿರ್ದೇಶಕರಾದ ಎಂ ಎಂ ಸಿಂಧೂರ, ಉಪನಿರ್ದೇಶಕರಾದ ಮೋಹನಕುಮಾರ ಹಂಚಾಟೆ, ಪ್ರಭಾರ ಉಪನಿರ್ದೇಶಕರಾದ ರವಿ ಭಜಂತ್ರಿ, ಬೆಳಗಾವಿ ನಗರದ ಕ್ಷೇತ್ರ ಶಿಕ್ಷಣಾಧಿಕಾರಿ ಲೀಲಾವತಿ ಎಸ್ ಹಿರೇಮಠ, ಕ್ಷೇತ್ರ ಸಮನ್ವಯಾಧಿಕಾರಿ ಆಯ್ ಡಿ ಹಿರೇಮಠ, ಇಸಿಓ, ಬಿ.ಆರ್ಪಿ, ಸಿ.ಆರ್ಪಿಗಳು ಮತ್ತು ನಗರ ಸೇವಕರು ಎಸ್ ಡಿಎಂಸಿ ಅಧ್ಯಕ್ಷರು, ಸದಸ್ಯರು ಹಾಗೂ ಪಾಲಕರು ಮತ್ತಿತರರು ಉಪಸ್ಥಿತರಿದ್ದರು.

## ರಾಜ್ಯದಲ್ಲಿ 26 ಅಗ್ನಿಶಾಮಕ ಅಧಿಕಾರಿ ಹುದ್ದೆ ಖಾಲಿ

ಧಾರವಾಡ: ರಾಜ್ಯದಲ್ಲಿ ಜಿಲ್ಲಾ ಅಗ್ನಿಶಾಮಕ ಅಧಿಕಾರಿ ವೃಂದದ 26 ಹುದ್ದೆಗಳು ಖಾಲಿ ಇದ್ದು, ಬೆಂಗಳೂರಿನಲ್ಲೇ 13 ಹುದ್ದೆಗಳು ಖಾಲಿ ಇವೆ. ಜಿಲ್ಲಾ ಅಗ್ನಿಶಾಮಕ ಅಧಿಕಾರಿಯು ಜಿಲ್ಲೆಯ ಎಲ್ಲ ಅಗ್ನಿಶಾಮಕ ಠಾಣೆಗಳ ಉಸ್ತುವಾರಿ ಆಗಿರುತ್ತಾರೆ. ದುರಂತಗಳ ನಿರ್ವಹಣೆ, ಅವಘಡ ಸಂಭವಿಸಿದಂತೆ ಮುಂಜಾಗ್ರತೆ ವಹಿಸುವಿಕೆ ಅವರದ್ದೇ ಹೊಣೆ. ಆದರೆ, ಅಧಿಕಾರಿಗಳು, ನೌಕರರ ಕೊರತೆಯಿಂದ ಅಗ್ನಿಶಾಮಕ ಮತ್ತು ತುರ್ತು ಸೇವೆಗಳ ಇಲಾಖೆಯ ಕಾರ್ಯ ನಿರ್ವಹಣೆ ಸವಾಲಾಗಿ ಪರಿಣಮಿಸಿದೆ.'ವಿಜಯಪುರದ ಗೋದಾಮು ಅವಘಡದಲ್ಲಿ 7 ಕಾರ್ಮಿಕರ ಸಾವು, ಆನೇಕಲ್ ತಾಲ್ಲೂಕಿನ ಅತ್ತಿಬೆಲೆಯ ಪಟಾಕಿ ಗೋದಾಮಿನಲ್ಲಿ 15 ಜನರ ಸಾವು ಪ್ರಕರಣ ಮುಂತಾದವು ಉಲ್ಲೇಖಿಸಿ ಇಂಥವು ಮರುಕಳಿಸದಂತೆ ಸರ್ಕಾರವು ಜಿಲ್ಲಾಧಿಕಾರಿಗಳಿಗೆ ಸೂಚನೆ ನೀಡಿದೆ. ಆದರೆ, ನಮ್ಮ ಇಲಾಖೆಯಲ್ಲಿ ಪ್ರಮುಖ ಹುದ್ದೆಗಳು ಖಾಲಿ ಇರುವಾಗ ನಿರ್ವಹಿಸುವುದು ಹೇಗೆ' ಎಂದು ಅಗ್ನಿಶಾಮಕ ದಳದ ಸಿಬ್ಬಂದಿಯೊಬ್ಬರು ತಿಳಿಸಿದರು.

ಜಿಲ್ಲಾ ಅಗ್ನಿಶಾಮಕ ಅಧಿಕಾರಿ ಹುದ್ದೆ ಭರ್ತಿ ಮಾಡುವಂತೆ ಕೋರಿ ಅಗ್ನಿ ಶಾಮಕ ಮತ್ತು ತುರ್ತುಸೇವೆಗಳ ಇಲಾಖೆ ಮಹಾನಿರ್ದೇಶಕರಿಗೆ ಇದೇ ವರ್ಷ ಅಕ್ಟೋಬರ್‌ನಲ್ಲಿ ಕೊಪ್ಪಳ ಜಿಲ್ಲಾಧಿಕಾರಿ ಪತ್ರ ಬರೆದಿದ್ದಾರೆ.

'ಇಲಾಖೆಯ 20 ಠಾಣಾ ಅಧಿಕಾರಿಗಳು ನಾಗಪುರದ ತರಬೇತಿ ಕೇಂದ್ರದಲ್ಲಿ ಈಚೆಗೆ ತರಬೇತಿ ಪಡೆದಿದ್ದಾರೆ. ಜಿಲ್ಲಾ ಅಗ್ನಿಶಾಮಕ ಅಧಿಕಾರಿ ಹುದ್ದೆಗೆ ಬಡ್ತಿ ಪಡೆಯಲು ಅರ್ಹರಾಗಿದ್ದಾರೆ. ಆದರೆ, ಸರ್ಕಾರ ಇನ್ನೂ ಕ್ರಮ ಕೈಗೊಂಡಿಲ್ಲ' ಎಂದು ಅಗ್ನಿಶಾಮಕ ಇಲಾಖೆ ಅಧಿಕಾರಿಯೊಬ್ಬರು ತಿಳಿಸಿದರು.

## ಹಾಸ್ಯದ ಮೂಲಕ ಸಂದೇಶ ನೀಡಿದ ಬೀಚಿ



ನರೇಗಲ್: 'ಬೀಚಿಯವರು ತಮ್ಮ ಸಂದೇಶಗಳನ್ನು ಹಾಸ್ಯದ ಮೂಲಕ ಜನರಿಗೆ ಉಣ ಬಡಿಸಿದರು. ಅವರ ಹಾಸ್ಯದಲ್ಲಿ ವಿಡಂಬನೆ ಇತ್ತಾದರೂ ಅದರಲ್ಲಿ ಅರ್ಥ ಇರುತ್ತಿತ್ತು. ಹೀಗಾಗಿ ಕನ್ನಡ ನಾಡಿನ ಅಪರೂಪದ ಸಾಹಿತಿಯಾಗಿ ಪ್ರಸಿದ್ಧಿ ಪಡೆದಿದ್ದಾರೆ' ಎಂದು ಗಂಗಾವತಿ ಪ್ರಾಣೇಶ್ ಹೇಳಿದರು. ಪಟ್ಟಣದ ಹಿರೇಮಠದ ಸಭಾ ಭವನದಲ್ಲಿ ಭಾನುವಾರ ಸಂಜೆ ನಡೆದ ಬೀಚಿ ಬಳಗದ ದಶಮಾನೋತ್ಸವ ಕಾರ್ಯಕ್ರಮದಲ್ಲಿ ಮಾತನಾಡಿದರು.

'ಮನುಷ್ಯ ಬೆಳೆದಂತೆ ಅವನ ಆಯುಷ್ಯ ಕಡಿಮೆಯಾಗುತ್ತ ಹೋಗುತ್ತದೆ. ಆದರೆ ಸಂಘಟನೆಗಳು ಬೆಳೆದಂತೆ ಅವುಗಳ ಆಯುಷ್ಯ ಹೆಚ್ಚಾಗುತ್ತದೆ. ಆದ್ದರಿಂದಲೆ ಸಂಘ–ಸಂಸ್ಥೆಗಳು ದಶಮಾನೋತ್ಸವ, ಬೆಳ್ಳಿ ಮಹೋತ್ಸವ, ಸುವರ್ಣ ಮಹೋತ್ಸವ, ಅಮೃತ ಮಹೋತ್ಸವ, ಶತಮಾನೋತ್ಸವಗಳನ್ನು ಆಚರಿಸುವ ರೂಢಿ ನಮ್ಮಲ್ಲಿದೆ. ನರೇಗಲ್ ಬೀಚಿ ಬಳಗವು ಶತಮಾನೋತ್ಸವವನ್ನು ಆಚರಿಸುವಂತಾಗಲಿ' ಎಂದರು. ನಂತರ ತಮ್ಮ ಹಾಸ್ಯದ ಮಾತುಗಳ ಧಾಟಿಯಲ್ಲಿ ಅನೇಕ ಪ್ರಸಂಗಗಳನ್ನು ಹೇಳಿ ಸಭಿಕರನ್ನು ನಗೆಗಡಲಲ್ಲಿ ತೇಲಿಸಿದರು.

ಅನಿಲ ವೈದ್ಯ, ಬಸವರಾಜ ಮಹಾಮನಿ ಮತ್ತು ನರಸಿಂಹ ಜೋಶಿಯವರ ತಮ್ಮ ಮಾತುಗಳ ಮೂಲಕ ಜನರನ್ನು ರಂಜಿಸಿದರು. ಬೀಚಿ ಬಳಗದ ನಿಕಟಪೂರ್ವ ಅಧ್ಯಕ್ಷರಾದ ಡಿ.ಎ. ಅರವಟಗಿಮಠ, ಎಂ.ಎಸ್. ದಢೇಸೂರಮಠ, ಅರುಣ ಬಿ. ಕುಲಕರ್ಣಿ, ಎಸ್.ಜಿ. ಗುರಿಕಾರ, ಎಸ್.ಸಿ. ಗುಳಗಣ್ಣವರ, ಆರ್.ಕೆ. ಗಚ್ಚಿನಮಠ, ಸುರೇಶ ಹಳ್ಳಿಕೇರಿ, ಸ್ಮರಣ ಸಂಚಿಕೆಯ ಸಂಪಾದಕ ಕಲ್ಲಯ್ಯ ಹಿರೇಮಠ ಅವರನ್ನು ಸನ್ಮಾನಿಸಲಾಯಿತು.

ಕನ್ನಡದ ಪೂಜಾರಿ ಹಿರೇಮಗಳೂರು ಕಣ್ಣನ್, ಹಿರೇಮಠದ ಮಲ್ಲಿಕಾರ್ಜುನ ಶಿವಾಚಾರ್ಯರು, ಹಾಲಕೆರೆ ಸಂಸ್ಥಾನ ಮಠದ ಮುಪ್ಪಿನ ಬಸವಲಿಂಗ ಸ್ವಾಮೀಜಿ, ಬೀಚಿ ಬಳಗದ ಅಧ್ಯಕ್ಷ ಕೆ.ಎಸ್. ಕಳಕಣ್ಣವರ, ಮಿಥುನ ಪಾಟೀಲ, ಶೇಖರ ಡಿ. ಸಜ್ಜನರ, ಕೆ.ಬಿ. ಧನ್ನೂರ, ಎನ್.ಆರ್. ಗೌಡರ ಇದ್ದರು.

## ಶಾಸಕರ ಸಂಧಾನ: 27 ದಿನಗಳ ಧರಣಿ ಅಂತ್ಯ

ಕೊಪ್ಪಳ: ಇಲ್ಲಿನ ವಸತಿ ನಿರಾಶ್ರಿತರಿಗೆ ಆಶ್ರಯ ನಿವೇಶನ ನೀಡಬೇಕು ಎಂದು ಆಗ್ರಹಿಸಿ 27 ದಿನಗಳಿಂದ ಇಲ್ಲಿನ ನಗರಸಭೆ ಎದುರು ವಸತಿ ನಿರಾಶ್ರಿತರ ಹೋರಾಟ ಸಮಿತಿ ನಡೆಸುತ್ತಿದ್ದ ಧರಣಿ, ಶಾಸಕ ರಾಘವೇಂದ್ರ ಹಿಟ್ನಾಳ ಸಂಧಾನದಿಂದಾಗಿ ತಾತ್ಕಾಲಿಕವಾಗಿ ಮಂಗಳವಾರ ಅಂತ್ಯ ಕಂಡಿತು. ಕುವೆಂಪು ನಗರ 500 ಪ್ಲಾಟ್, ಸಿಂದೋಗಿ ರಸ್ತೆಯಲ್ಲಿ 2,000 ನಿವೇಶನ, ನಿರ್ಮಿತಿ ಕೇಂದ್ರ, ಮೆಹಬೂಬ ನಗರ ಮತ್ತು ಗಾಂಧಿನಗರದಲ್ಲಿ ವಾಸವಾಗಿರುವ ಬಡವರಿಗೆ ಹಕ್ಕುಪತ್ರವನ್ನೂ ನೀಡಬೇಕು ಎಂದು ಆಗ್ರಹಿಸಿ ಧರಣಿ ನಡೆಯುತ್ತಿತ್ತು. ಧರಣಿ ಸ್ಥಳಕ್ಕೆ ಮಂಗಳವಾರ ಭೇಟಿ ನೀಡಿದ ರಾಘವೇಂದ್ರ ಹಿಟ್ನಾಳ 'ಸೋಮವಾರ ಆಶ್ರಯ ಸಮಿತಿ ಸಭೆ ನಡೆಸಿ ಖಾಲಿ ನಿವೇಶನಗಳ ಮಾಹಿತಿ ಪಡೆದು ಅರ್ಜಿ ಆಹ್ವಾನಿಸಲಾಗುವುದು. ಆಗ ಅರ್ಜಿ ಹಾಕಿದ ಅರ್ಹರಿಗೆ ನಿವೇಶನ ಒದಗಿಸಲಾಗುವುದು' ಎಂದು ಭರವಸೆ ನೀಡಿದರು. ಬಳಿಕ ಸಭೆ ನಡೆಸಿದ ಸಮಿತಿ ಸದಸ್ಯರು, ಸೋಮವಾರದ ಸಭೆಯಲ್ಲಿ ನಮಗೆ



ನ್ಯಾಯಸಮ್ಮತ ಎನಿಸುವ ರೀತಿಯಲ್ಲಿ ತೀರ್ಮಾನವಾದರೆ ಹೋರಾಟ ಕಾಯಂ ಆಗಿ ಕೈಬಿಡುವುದು, ಇಲ್ಲವಾದರೆ ಮಂಗಳವಾರ ಮತ್ತೆ ಧರಣಿ ಮುಂದುವರಿಸೋಣ' ಎಂದು ತೀರ್ಮಾನಿಸಿದರು.

ಅಂಚೆ ನೌಕರರ ಧರಣಿ: ಗ್ರಾಮೀಣ ಭಾಗದಲ್ಲಿ ಕೆಲಸ ಮಾಡುವ ದಿನಗೂಲಿ ನೌಕರರಿಗೆ ಕೆಲಸದ ಅವಧಿಯನ್ನು ಎಂಟು ಗಂಟೆಗಳಿಗೆ ಸೀಮಿತ ಮಾಡಬೇಕು, ಪಿಂಚಣಿ ಸೌಲಭ್ಯ ಒದಗಿಸಬೇಕು, ಗ್ರಾಜ್ಯುಟಿ 2 ಲಕ್ಷದಿಂದ 5 ಲಕ್ಷಕ್ಕೆ ಹೆಚ್ಚಿಸಬೇಕು ಎಂಬುದು ಸೇರಿದಂತೆ ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಆಗ್ರಹಿಸಿ ಜಿಲ್ಲೆಯ ಗ್ರಾಮೀಣ ಅಂಚೆ ನೌಕರರು ಪ್ರಧಾನ ಅಂಚೆ ಕಚೇರಿ ಆವರಣದಲ್ಲಿ ಮಂಗಳವಾರ ಧರಣಿ ಆರಂಭಿಸಿದರು. ಇದರಿಂದಾಗಿ ಜಿಲ್ಲೆಯ 180 ಗ್ರಾಮೀಣ ಅಂಚೆ ಕೇಂದ್ರಗಳಲ್ಲಿ ಪತ್ರಗಳ ಹಾಗೂ ದಾಖಲೆಗಳ ವಿಲೇವಾರಿ ಸಮಸ್ಯೆಯಾಯಿತು. ಸಂಘದ ಕೊಪ್ಪಳ ಉಪವಿಭಾಗದ ಸಂಘಟನಾ ಸದಸ್ಯ ಬಸವರಾಜ ಗುರಿಕಾರ, ಸಂಘಟನೆಯ ಕಾರ್ಯದರ್ಶಿ ಬಸವರಾಜ ಸಾಲಿಮಠ, ಪ್ರಮುಖರಾದ ಮಲ್ಲಪ್ಪ ಮಾಲಿಪಾಟೀಲ ಮತ್ತು ರಾಮಣ್ಣ ಫಿಟ್ಟರ್ ಸೇರಿದಂತೆ ಅನೇಕರು ಪಾಲ್ಗೊಂಡಿದ್ದರು.

## ಕೆ.ಇ.ಬೋರ್ಡ ಪ್ರೌಢಶಾಲೆಯ ಪ್ರತಿಭಾ ಪುರಸ್ಕಾರ



ಧಾರವಾಡ: ಪ್ರತಿಯೊಬ್ಬ ವಿದ್ಯಾರ್ಥಿ ಒಂದಲ್ಲಾ ಒಂದು ಉನ್ನತ ಗುರಿ ಇಟ್ಟುಕೊಳ್ಳಲೇಬೇಕು ಅಂದಾಗ ಮಾತ್ರ ಸಾಧನೆಯ ಶಿಖರವೇರಲು ಸಾಧ್ಯ, ಯಾವುದೇ ಸಾಧನೆಗೆ ನಿರಂತರ ಪರಿಶ್ರಮದ ಅಗತ್ಯವಿದೆ. ವಿದ್ಯಾರ್ಥಿಗಳು ಪರಿಶ್ರಮದಿಂದ ಮುಂದೆ ಬರಲು ಪ್ರಯತ್ನಿಸಬೇಕು ಎಂದು ಕರ್ನಾಟಕ ಹಿಸ್ಟಾರಿಕಲ್ ಸೊಸೈಟಿ ಚೇರಮನ್ ಡಾ. ಗಿರಿಧರ ಕಿನ್ಹಾಳ ಅಭಿಪ್ರಾಯಪಟ್ಟರು. ಸ್ಥಳೀಯ ಮಾಳಮಡ್ಡಿ ಕೆ.ಇ.ಬೋರ್ಡ ಪ್ರೌಢಶಾಲೆಯಲ್ಲಿ ಹಮ್ಮಿಕೊಳ್ಳಲಾದ ಕಳೆದ ಏಪ್ರೀಲ್ ನಲ್ಲಿ ನಡೆದ ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ಸಾಧನೆ ಮಾಡಿದ ಪ್ರತಿಭಾವಂತ ವಿದ್ಯಾರ್ಥಿಗಳ ಸತ್ಕಾರ ಸಮಾರಂಭದ ಮುಖ್ಯಅತಿಥಿಯಾಗಿ ಅವರು ಮಾತನಾಡಿದರು. ಇತ್ತೀಚಿನ ದಿನಗಳಲ್ಲಿ ವಿದ್ಯಾರ್ಥಿ ಸಮೂಹದಲ್ಲಿ ಸಂಸ್ಕೃತಿ – ಸಂಸ್ಕಾರಗಳ ಕೊರತೆ ಇದೆ ಎಂಬುದು ಬಹುತೇಕರ ಅಭಿಪ್ರಾಯ ಆದರೆ ಕೆ.ಇ.ಬೋರ್ಡ ಶಿಕ್ಷಣ ಸಂಸ್ಥೆಯಲ್ಲಿ ಇಂದಿಗೂ ಹೆಮ್ಮೆ ಪಡುವ ಸಂಸ್ಕೃತಿಯನ್ನು ಕಾಣಬಹುದು. ವಿದ್ಯಾರ್ಥಿಗಳು ಚರಿತ್ರೆ, ಚೈತನ್ಯ, ಚಾತುರ್ಯ ಗುಣಗಳನ್ನು ಜೀವನದಲ್ಲಿ ಅಳವಡಿಸಿಕೊಂಡು ಸುಸಂಸ್ಕೃತರಾಗಿ ಬಾಳಬೇಕು ಎಂದು ಅವರು ಹಾರೈಸಿದರು. ಕಾರ್ಯಕ್ರಮದ ಅಧ್ಯಕ್ಷತೆವಹಿಸಿದ ಶಾಲಾ ಸುಧಾರಣಾ ಸಮಿತಿ ಅಧ್ಯಕ್ಷ ಡಾ ಕೃಷ್ಣ ಕುಲಕರ್ಣಿ ನಮ್ಮ ಶಾಲೆಯ ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ ಅಪಾರ ಪ್ರಮಾಣದ ಬಹುಮಾನ ಹಾಗೂ ಸಹಾಯಧನ ನೀಡಲಾಗುವುದು. ಇದರ ಸದುಪಯೋಗವನ್ನು ಅರ್ಹ ವಿದ್ಯಾರ್ಥಿಗಳು ಪಡೆದುಕೊಂಡು ಯಶಸ್ವಿಯಾಗುವಂತೆ ಸಲಹೆ ನೀಡಿದರು. ಉಪಪ್ರಾಂಶುಪಾಲ ಎನ್.ಎಸ್.ಗೋವಿಂದರಡ್ಡಿ ಸ್ವಾಗತಿಸಿ, ಪ್ರಾಸ್ತಾವಿಕವಾಗಿ ಮಾತನಾಡಿದರು. ಶಿಕ್ಷಕ ಬಸವರಾಜ ಆರೇರ್ ಪರಿಚಯಿಸಿದರು. .

## ಮೊದಲ ಕಂತಿನ ಪೂರಕ ಅಂದಾಜು ವೆಚ್ಚಗಳಿಗೆ ವಿಧಾನಸಭೆ ಅಂಗೀಕಾರ

ಬೆಳಗಾವಿ: ಸುವರ್ಣ ಸೌಧ: ಬೆಳಗಾವಿ ಚಳಿಗಾಲದ ಅಧಿವೇಶನದ ವಿಧಾನಸಭಾ ಕಲಾಪದಲ್ಲಿ ಬುಧವಾರ, ಮುಖ್ಯಮಂತ್ರಿ ಸಿದ್ದರಾಮಯ್ಯನವರು ಮಂಡಿಸಿದ 2023–24ನೇ ಸಾಲಿನ ಮೊದಲನೇ ಪೂರಕ ಅಂದಾಜುಗಳ ವೆಚ್ಚ ರೂ.3542.10 ಕೋಟಿಗಳಿಗೆ ಅಂಗೀಕಾರ ದೊರಕಿದೆ.

ಸದನದ ಅಂಗೀಕಾರ ಕೋರಿ ಮಾತನಾಡಿದ ಮುಖ್ಯಮಂತ್ರಿ ಸಿದ್ದರಾಮಯ್ಯ, ಈ ಹಿಂದೆ ಜುಲೈನಲ್ಲಿ ರೂ.3,41,321 ಕೋಟಿಗಳ ಆಯವ್ಯಯ ಮಂಡಿಸಲಾಗಿತ್ತು. ಆಯವ್ಯಯದಲ್ಲಿ ಘೋಷಿಸಿದ ಹೊರತಾಗಿ ಸರ್ಕಾರದ ಕೆಲವು ಖರ್ಚುಗಳಿಗೆ ರಾಜ್ಯದ ತುರ್ತ ನಿಧಿಯಡಿ ಅನುದಾನವನ್ನು ಒದಗಿಸಲಾಗಿದೆ. ಹೀಗೆ ವೆಚ್ಚ ಮಾಡಿದ ಮೊಬಲಗನ್ನು ತೋರಿಸುವ ಪೂರಕ ಅಂದಾಜು ವಿವರಣೆಯನ್ನು ರಾಜ್ಯದ ಸದನದಲ್ಲಿ ಇಟ್ಟು ಒಪ್ಪಿಗೆ ಪಡೆದುಕೊಳ್ಳಬೇಕು. ಇದಕ್ಕೆ ಸಂವಿಧಾನದ 205(1)(ಎ) ಅನುಚ್ಛೇದ ಅವಕಾಶ ಕಲ್ಪಿಸಿದೆ. ಈಗ ಮಂಡಿಸಿದ ಪೂರಕ ಅಂದಾಜಿನ ಗಾತ್ರ 2023–24ರ ಆಯವ್ಯಯದ ಶೇ.1 ರಷ್ಟು ಮಾತ್ರ ಎಂದರು.

ಮೊದಲನೇ ಪೂರಕ ಅಂದಾಜಿನಲ್ಲಿ ಒದಗಿಸಿರುವ ಒಟ್ಟು ಮೊತ್ತ ರೂ.3542.10 ಕೋಟಿಯಲ್ಲಿ ರೂ.17.66 ಕೋಟಿ ಪ್ರಭೃತ ವೆಚ್ಚ ಮತ್ತು ರೂ.3524.44 ಕೋಟಿ ಪುರಸ್ಕೃತ ವೆಚ್ಚಗಳು ಸೇರಿವೆ. ಇದರಲ್ಲಿ ರೂ.326.98 ಕೋಟಿ ರಿಸರ್ವ ಫಂಡ್ ಠೇವಣಿ ಹಾಗೂ ಎಸ್.ಎನ್.ಎ ಖಾತೆಗಳಿಂದ ಭರಿಸಲಾಗುವುದು. ರೂ.684.28 ಕೋಟಿ ಕೇಂದ್ರ ಸರ್ಕಾರ ಸಹಾಯಕ್ಕೆ ಸಂಬಂಧಿಸಿವೆ ಎಂದರು.

ಪೂರಕ ಅಂದಾಜಿನಲ್ಲಿ ರೂ.915 ಕೋಟಿ ಬಂಡವಾಳ ವೆಚ್ಚವಾಗಿ ಅಭಿವೃದ್ಧಿ ಕಾರ್ಯಗಳಿಗೆ ವ್ಯಯಿಸಲಾಗುವುದು. ಸಮಾಜ ಕಲ್ಯಾಣ ಇಲಾಖೆಯ ಎಸ್.ಇ.ಪಿ ಹಾಗೂ ಟಿ.ಎಸ್.ಪಿ ಯೋಜನಗೆ ರೂ.508 ಕೋಟಿ, ರಾಜ್ಯ ವಿಪತ್ತು ನಿರ್ವಹಣೆ ಪ್ರಾಧಿಕಾರಕ್ಕೆ ರೂ.502 ಕೋಟಿ, ಸಮಗ್ರ ಶಿಶು ಅಭಿವೃದ್ಧಿ ಯೋಜನೆಗೆ ರೂ.310 ಕೋಟಿ, ರಾಷ್ಟ್ರೀಯ ಆಹಾರ ಭದ್ರತಾ ಯೋಜನೆಯ ಸಾಗಣಿಕೆ ವೆಚ್ಚಗಳಿಗೆ ರೂ.297 ಕೋಟಿ, ಎಸ್.ಸಿ.ಡಿ.ಎಸ್‌ಗೆ ರೂ.284 ಕೋಟಿ, ಉಗ್ರಾಣ ನಿಗಮಕ್ಕೆ ಸಾಲವಾಗಿ ರೂ.229 ಕೋಟಿ, ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಆರೋಗ್ಯ ಕ್ಷೇಮ ಕೇಂದ್ರಗಳಾಗಿ ಮೇಲ್ದರ್ಜೆಗೆ ಏರಿಸಲು ರೂ.189 ಕೋಟಿ, ನಬಾರ್ಡ ರಸ್ತೆಗಳಿಗೆ ರೂ.150 ಕೋಟಿ, ಕೇಂದ್ರದ ಹದಿಹರಿಯದ ಗ್ರಂಥಾಲಯ ಇ ಲೈಬ್ರರಿಗೆ ಯೋಜನೆಗೆ ರಾಜ್ಯದ ಪಾಲಾಗಿ ರೂ.132 ಕೋಟಿ, ಕೃಷಿ ಭಾಗ್ಯ ಯೋಜನೆಗೆ ರೂ.100 ಸೇರಿದಂತೆ ತೋಟಗಾರಿಕೆ, ಪಶುಸಂಗೋಪನೆ ಮತ್ತು ಮೀನುಗಾರಿಕೆ, ಕಂದಾಯ, ಶಿಕ್ಷಣ, ಆಹಾರ ಮತ್ತು ನಾಗರಿಕ ಸರಬರಾಜು, ವಾಣಿಜ್ಯ ಮತ್ತು ಕೈಗಾರಿಕೆ, ನಗರಾಭಿವೃದ್ಧಿ ಮತ್ತು ವಸತಿ, ಲೋಕೋಪಯೋಗಿ, ನೀರಾವರಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ, ಆರ್ಥಿಕ ಇಲಾಖೆಗಳಿಗೆ ಅನುದಾನ ಒದಗಿಸಲಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಮಾಹಿತಿ ನೀಡಿದರು. ರಾಜ್ಯ ಸರ್ಕಾರ ರೂ.39,000 ಕೋಟಿಗಳ ಗ್ಯಾರೆಂಟಿ ಯೋಜನೆಗಳನ್ನು ಜಾರಿಗೊಳಿಸಿದೆ. ಇದರ ನಡುವೆಯು ಆರ್ಥಿಕ ಶಿಸ್ತು ಕಾಪಾಡಿಕೊಂಡು ಬರಲಾಗಿದೆ. ಹಿಂದಿನ ಸರ್ಕಾರಗಳು ಸಹ ಪೂರಕ ಅಂದಾಜು ಮಂಡಿಸಿವೆ. ಸದನವು 2023–24ನೇ ಸಾಲಿನ ಪೂರಕ ಅಂದಾಜಿಗೆ ಅಂಗೀಕಾರ ನೀಡುವಂತೆ ಕೋರಿದರು. ಪೂರಕ ಅಂದಾಜಿನ ಧನವಿಯೋಗಕ್ಕೆ ಅನುವಾಗುವಂತೆ 2023ನೇ ಸಾಲಿನ ಕರ್ನಾಟಕ ಧನವಿನಿಯೋಗ ಸಂಖ್ಯೆ–4 ವಿಧೇಯಕವನ್ನು ಸದನದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಮಂಡಿಸಿದರು.

ಚರ್ಚೆಯ ನಂತರ ಸದನದಲ್ಲಿ ಪೂರಕ ಅಂದಾಜು ಹಾಗೂ ಧನವಿನಯೋಗ ವಿಧೇಯಕಕ್ಕೆ ಅನುಮೋದನೆ ನೀಡಿ ಅಂಗೀಕರಿಸಲಾಯಿತು. ಈವುಗಳು ಇದೇ ಅಧಿವೇಶನದಲ್ಲಿ ವಿಧಾನ ಪರಿಷತ್ ಅಂಗೀಕಾರಕ್ಕಾಗಿ ಚರ್ಚೆಗೆ ಬರಲಿವೆ.

# ಸಂಸದ ಪ್ರತಾಪ್ ಸಿಂಹ ಕಚೇರಿಗೆ ಕೈ ಕಾರ್ಯಕರ್ತರ ಮುತ್ತಿಗೆ ಯತ್ನ



ಮೈಸೂರು: ಲೋಕಸಭೆಯ ಒಳಗೆ ಹೋಗಲು ಪಾಸ್ ಕೊಟ್ಟ ಕಾರಣಕ್ಕೆ ಇದೀಗ ಸಂಸದ ಪ್ರತಾಪ್ ಸಿಂಹ ಕಚೇರಿಗೆ ಮುತ್ತಿಗೆ ಹಾಕಲು ಯತ್ನಿಸಲಾಗಿದೆ.

ಮೈಸೂರಿನ ಜಲದರ್ಶಿನಿ ಅತಿಥಿಗೃಹದಲ್ಲಿರುವ ಕಚೇರಿ ಮುಂಭಾಗ ಕಾಂಗ್ರೆಸ್ ಪ್ರತಿಭಟನೆ ನಡೆಸಿದೆ. ಪ್ರತಾಪ್ ಸಿಂಹ ಪಾಸ್ ಕೊಟ್ಟಿರುದನ್ನು ಖಂಡಿಸಿ ಪ್ರತಿಭಟಿಸಿದ ಕಾಂಗ್ರೆಸ್ ಕಾರ್ಯಕರ್ತರು ಸಂಸದರ ಕಚೇರಿಯ ಕಾಂಪೌಡ್ ಗೋಡೆ ಏರಿ ಒಳಗೆ ನುಗ್ಗಲು ಯತ್ನಿಸಿದ್ದಾರೆ. ಈ ವೇಳೆ ಪೊಲೀಸರು ಹಾಗೂ ಕಾಂಗ್ರೆಸ್ ಕಾರ್ಯಕರ್ತರ ನಡುವೆ ಜಟಾಪಟಿ ನಡೆದಿದೆ.

ನಡೆದಿದ್ದೇನು..?: ಸಂಸತ್ ಮೇಲೆ ದಾಳಿ ನಡೆದು 22 ವರ್ಷವಾದ ಹಿನ್ನೆಲೆಯಲ್ಲಿ ಇಂದು ಬೆಳಗ್ಗೆ ಹುತಾತ್ಮ ಭದ್ರತಾ ಸಿಬ್ಬಂದಿಗೆ ಗೌರವ ಸಲ್ಲಿಸಲಾಗಿತ್ತು. ಬಳಿಕ ಕಲಾಪ ನಡೆಯುತ್ತಿದ್ದ ಹೊತ್ತಿನಲ್ಲೇ ಪಾರ್ಲಿಮೆಂಟ್ ಒಳಗೆ ಕಲರ್ ಸ್ಮೋಕ್ ಸಿಡಿಸಿದ ಯುವಕರಿಗೆ ಮೈಸೂರು ಸಂಸದರ ಕಚೇರಿಯಿಂದ ಪಾಸ್ ವಿತರಣೆಯಾಗಿದೆ ಎಂಬ ವಿಚಾರ ಬೆಳಕಿಗೆ ಬಂದಿತ್ತು.

ಈ ವಿಚಾರ ಸುದ್ದಿಯಾಗುತ್ತಿದ್ದಂತೆಯೇ ಸಂಸದರು 'ಪಬ್ಲಿಕ್ ಟಿವಿ'ಗೆ ಪ್ರತಿಕ್ರಿಯೆ ನೀಡಿದ್ದಾರೆ. ಕಲಾಪ ವೀಕ್ಷಿಸುತ್ತೇವೆ ಎಂದು ಹೇಳಿ ಯುವಕರು ಪಾಸ್ ಪಡೆದುಕೊಂಡು ಹೋಗಿದ್ದರು ಎಂದು ಅವರು ತಿಳಿಸಿದ್ದಾರೆ. ಮೈಸೂರು ಮೂಲದ ಮನೋರಂಜನ್ ಎಂಬ ಯುವಕ ಕಲಾಪದ ವೇಳೆ ನುಗ್ಗಿರುವುದು ಎಂದು ತಿಳಿದು ಬಂದಿದೆ. ಆತನನ್ನು ಪೊಲೀಸರು ವಶಕ್ಕೆ ಪಡೆದಿದ್ದು ವಿಚಾರಣೆ ನಡೆಸುತ್ತಿದ್ದಾರೆ.

# ಸಂಸದ ಪ್ರತಾಪ್ ಸಿಂಹ ವಿರುದ್ಧ ಸಿಎಂ ಸಿದ್ದರಾಮಯ್ಯ ಕಿಡಿ



ಬೆಳಗಾವಿ: ಸಂಸತ್ ಭವನದ ಮೇಲೆ ದಾಳಿ ನಡೆಸಿದ ಯುವಕರಿಗೆ ಮೈಸೂರಿನ ಲೋಕಸಭಾ ಸದಸ್ಯ ಪ್ರತಾಪ್ ಸಿಂಹ ಅವರೇ ಪಾಸ್ ನೀಡಿರುವ ವರದಿಗಳು ಬರುತ್ತಿವೆ. ಈ ಸುದ್ದಿ ನಿಜವಾಗಿದ್ದಲ್ಲಿ ಈ ಸಂಸದರನ್ನು ಕೂಡಾ ವಿಚಾರಣೆಗೆ ಒಳಪಡಿಸಬೇಕಾಗುತ್ತದೆ ಎಂದು ಸಂಸದ ಪ್ರತಾಪ್ ಸಿಂಹ ವಿರುದ್ಧ ಸಿಎಂ ಸಿದ್ದರಾಮಯ್ಯ ಟ್ವೀಟ್ ನಲ್ಲಿ ಕಿಡಿ ಕಾರಿದ್ದಾರೆ. ಪಾಸ್ ನೀಡಿರಬೇಕಾಗಿದ್ದರೆ ಯುವಕರು ಸಂಸದರ ಪರಿಚಯಸ್ಥರಾಗಿರಬಹುದು. ಪರಿಚಯಸ್ಥರಲ್ಲದೆ ಇದ್ದರೆ ಅಪರಿಚಿತರಿಗೆ ಪಾಸುಗಳನ್ನು ಹೇಗೆ ನೀಡಲಾಯಿತು ಎನ್ನುವ ಪ್ರಶ್ನೆ ಕೂಡಾ ಹುಟ್ಟುತ್ತದೆ. ಕಾನೂನಿನಲ್ಲಿ ಬೇಜವಾಬ್ದಾರಿಯಿಂದ ನಡೆಯುವ ಅನಾಹುತ ಕೂಡಾ ಶಿಕ್ಷಾರ್ಹ ಎನ್ನುವುದನ್ನು ತಿಳಿದುಕೊಳ್ಳಬೇಕಾಗುತ್ತದೆ ಎಂದು ತಿಳಿಸಿದ್ದಾರೆ.

ಮೋದಿ ಉತ್ತರ ನೀಡಲಿ ಎಂದ ಸಿದ್ದರಾಮಯ್ಯ: ದೇಶದ ಹೃದಯದಂತಿರುವ ಸಂಸತ್ ಭವನಕ್ಕೆ ಬೇರೆ ಯಾವುದೇ ಪ್ರದೇಶ ಇಲ್ಲವೆ ಕಟ್ಟಡವನ್ನು ಮೀರಿದ ಬಿಗಿ ಭದ್ರತೆಯನ್ನು ನೀಡಲಾಗಿದೆ. ಹೀಗಿದ್ದರೂ ಈ ಯುವಕರು ಸ್ಮೋಕ್ ಬಾಂಬು ಹಿಡಿದುಕೊಂಡು ಸಂಸತ್ ಒಳಗೆ ಹೇಗೆ ಪ್ರವೇಶಿಸಿದರು? ಈ ಕೃತ್ಯದಲ್ಲಿ ಒಳಗಿನವರೇ ಯಾರಾದರೂ ಭಾಗಿಯಾಗಿದ್ದಾರೆಯೇ? ಈ ಯುವಕರ ಕೃತ್ಯದ ಹಿಂದೆ ಬೇರೆ ಯಾವುದಾದರೂ ಬಾಹ್ಯ ಶಕ್ತಿಗಳ ಕೈವಾಡ ಇದೆಯೇ? ದೇಶದ ಸಂಸತ್ ಭವನವೇ ಸುರಕ್ಷಿತವಾಗಿಲ್ಲದಿರುವಾಗ ದೇಶದ ಗಡಿ ಸುರಕ್ಷಿತವಾಗಿರುತ್ತದೆಯಾ? ಎಂಬಿತ್ಯಾದಿ ಪ್ರಶ್ನೆಗಳು ಸಹಜವಾಗಿಯೇ ಹುಟ್ಟಿಕೊಳ್ಳುತ್ತದೆ. ಈ ಪ್ರಶ್ನೆಗಳಿಗೆಲ್ಲ ಉತ್ತರಿಸಬೇಕಾಗಿರುವ ಹೊಣೆ ದೇಶದ ಪ್ರಧಾನಿ ನರೇಂದ್ರ ಮೋದಿ ಅವರದ್ದಾಗಿದೆ ಎಂದರು.

# ಸಾಮಾಜಿಕ ನ್ಯಾಯ ಒದಗಿಸುವಂತೆ ಸವಿತಾ ಸಮಾಜ ಒತ್ತಾಯ

ಬೆಳಗಾವಿ: ಮೀಸಲಾತಿ ಹಾಗೂ ಜಾತಿನಿಂದನೆ ಕಾಯ್ದೆ ಸೇರಿದಂತೆ ವಿವಿಧ ಬೇಡಿಕೆ ಈಡೇರಿಸುವಂತೆ ಒತ್ತಾಯಿಸಿ ಸವಿತಾ ಸಮಾಜದ ವತಿಯಿಂದ ಸುವರ್ಣಸೌಧ ಬಳಿ ಇರುವ ಸುವರ್ಣಗಾರ್ಡನ್ ಟೆಂಟ್ ನಲ್ಲಿ ಬುಧವಾರ ಪ್ರತಿಭಟನೆ ನಡೆಸಲಾಯಿತು.

ಕ್ಷೌರ ಮತ್ತು ನಾದಸ್ವರಕ್ಕೆ ಸವಿತಾ ಸಮಾಜದವರ ಸೇವೆ ಅಗತ್ಯವಿದೆ. ಆದರೆ, ಆಳುವ ಸರ್ಕಾರಗಳು ಸವಿತಾ ಸಮಾಜವನ್ನು ನಿರ್ಲಕ್ಷಿಸಿವೆ. ಸರ್ಕಾರಗಳಿಗೆ ಸಮುದಾಯದ ಬಗ್ಗೆ ಕಿಂಚಿತ್ತೂ ಕಾಳಜಿಯಿಲ್ಲ' ಎಂದು ಸವಿತಾ ಸಮಾಜ ಸದಸ್ಯರು ಅಸಮಾಧಾನ ವ್ಯಕ್ತಪಡಿಸಿದರು.

ಸವಿತಾ ಸಮಾಜ ಶುಭ ಕಾರ್ಯಗಳಿಗೆ ಮುಂದಿರುತ್ತದೆ. ಈ ಸಮುದಾಯ ಇಲ್ಲದಿದ್ದರೆ ಮನುಷ್ಯ ಸಮುದಾಯವೇ ವಿಕಾರವಾಗಿರುತ್ತಿತ್ತು. ಯಾವುದೇ ಶುಭ ಸಮಾರಂಭಕ್ಕೆ ಸವಿತಾ ಸಮಾಜದವರ ಅಗತ್ಯವಿದೆ. ಸಮುದಾಯದವರನ್ನು ಶೋಷಿತರಾಗಿ ಕಾಣುವುದು ಸರಿಯಲ್ಲ' ಎಂದು ಹೇಳಿದರು.



ಸವಿತಾ ಸಮಾಜದವರು ಪಾರಂಪರಿಕವಾಗಿ ಕ್ಷೌರಿಕ ವೃತ್ತಿ ನಂಬಿಕೊಂಡು ಬಂದಿದ್ದಾರೆ. ದೇವರುಗಳಿಗೂ ಸೇವೆ ಮಾಡಿದ್ದಾರೆ ಎಂಬ ಹೆಗ್ಗಳಿಕೆಗೆ ಪಾತ್ರರಾಗಿದ್ದಾರೆ. ಸಮುದಾಯವರು ಕುಲ ಕುಸುಬನ್ನೇ ನಂಬಿ ಜೀವನ ರೂಪಿಸಿಕೊಳ್ಳುವುದು ಕಷ್ಟ. ಸಮಾಜವು ಶೈಕ್ಷಣಿಕವಾಗಿ, ರಾಜಕೀಯವಾಗಿ, ಆರ್ಥಿಕವಾಗಿ ತುಂಬಾ ಹಿಂದುಳಿದಿದೆ' ಎಂದು ಕಳವಳ ವ್ಯಕ್ತಪಡಿಸಿದರು.

'ಅಕ್ಕಪಕ್ಕದ ರಾಜ್ಯಗಳಲ್ಲಿ ಸರ್ಕಾರವು ಸವಿತಾ ಸಮಾಜದ ಅಭಿವೃದ್ಧಿಗೆ ಹೆಚ್ಚಿನ ಅನುದಾನ ಮೀಸಲಿಟ್ಟಿದೆ. ಆದರೆ, ಕರ್ನಾಟಕದಲ್ಲಿ ಸರ್ಕಾರ ಸಮುದಾಯಕ್ಕೆ 5 ಕೋಟಿ ಮಾತ್ರ ಮೀಸಲಿಟ್ಟಿದೆ. ಇದರಿಂದ ಸಮುದಾಯದ ಅಭಿವೃದ್ಧಿ ಸಾಧ್ಯವಿಲ್ಲ' ಎಂದು ಆಕ್ರೋಶ ಹೊರಹಾಕಿದರು.

ಬೇಡಿಕೆಗಳು: ಇತರೆ ಜನಾಂಗದವರನ್ನು ಗೌರವಿಸಿ ಅಗತ್ಯ ಸೇವೆ ಒದಗಿಸುವಂತೆ ಸವಿತಾ ಸಮಾಜದ ಅಭಿವೃದ್ಧಿಗೂ ಯೋಜನೆ ರೂಪಿಸಬೇಕು. ಜಾತಿ ನಿಂದನೆ ತಡೆಗೆ ಪರಿಣಾಮಕಾರಿ ಕಾನೂನು ಜಾರಿಗೊಳಿಸಬೇಕು.

ರಾಜಕೀಯವಾಗಿ ಸಮುದಾಯಕ್ಕೆ ಹೆಚ್ಚಿನ ಪ್ರಾತಿನಿಧ್ಯ ನೀಡಬೇಕು, ರಾಜ್ಯದ 4 ಭಾಗಗಳಲ್ಲಿ ಕ್ಷೌರಿಕ ತರಬೇತಿ ಕೇಂದ್ರ ಹಾಗೂ ನಾದಸ್ವರ ಡೋಲು ನುಡಿಸುವ ತರಬೇತಿ ಶಾಲೆ ಸ್ಥಾಪಿಸಬೇಕು, ಸವಿತಾ ಸಮುದಾಯಕ್ಕೆ ಉಚಿತ ಆರೋಗ್ಯ ವಿಮೆ ನೀಡಬೇಕು ಎಂಬಿತ್ಯಾದಿ ಬೇಡಿಕೆಗಳನ್ನು ಮುಂದಿರಿಸಿದ್ದಾರೆ.

ಪ್ರತಿಭಟನೆಯಲ್ಲಿ ಸವಿತಾನಂದನಾಥ ಸ್ವಾಮೀಜಿ ಸೇರಿದಂತೆ ನೂರಾರು ಸಂಖ್ಯೆಯಲ್ಲಿ ಸವಿತಾ ಸಮಾಜವರು ಭಾಗವಹಿಸಿದ್ದರು.

# ವಿದ್ಯುತ್ ಅವಘಡಕ್ಕೆ ಲಕ್ಷಾಂತರ ಮೌಲ್ಯದ ಕಬ್ಬು ಭಸ್ಮ.!! ಕಂಗಾಲಾಗಿ ಕಣ್ಣೀರು ಹಾಕುತ್ತಿರುವ ಅನ್ನದಾತ

ವಿಜಯಪುರ: ಜಿಲ್ಲೆಯ ಬಬಲೇಶ್ವರ ಬಳಿಯ ವಿದ್ಯುತ್ ಅವಘಡದಿಂದ ಕಬ್ಬು ಬೆಳೆ ಬೆಂಕಿಗೆ ಆಹುತಿಯಾದ ಘಟನೆ ಸಂಭವಿಸಿದೆ. ಇದರಿಂದಾಗಿ ಲಕ್ಷಾಂತರ ರೂ. ಮೌಲ್ಯದ ಕಬ್ಬು ಹಾನಿಯಾಗಿ, ರೈತ ಆರ್ಥಿಕ ಸಂಕಷ್ಟಕ್ಕೆ ಸಿಲುಕಿದ್ದಾನೆ. ಬಬಲೇಶ್ವರ ಗ್ರಾಮದ ಮಲ್ಲಪ್ಪ ಭೀಮಪ್ಪ ಬೂದಿಹಾಳ ಅವರ ಗದ್ದೆಯಲ್ಲಿ ಕಟಾವು ಹಂತದಲ್ಲಿದ್ದ 3.20 ಎಕರೆ ಜಮೀನಿನಲ್ಲಿನ ಕಬ್ಬು ಬೆಳೆಗೆ ಏಕಾಏಕಿ ವಿದ್ಯುತ್ ಶಾಟ್ ಸರ್ಕ್ಯೂಟ್ ಸಂಭವಿಸಿದ್ದು, ಸುಮಾರು 8–10 ಅಡಿ ಎತ್ತರ ಬೆಳೆದಿದ್ದ ಕಬ್ಬಿಗೆ ತಾಗಿದೆ. ಇದರಲ್ಲಿ ಈಗಾಗಲೇ ಸುಮಾರು1.20 ಎಕರೆ ಜಮೀನಿನ ಕಬ್ಬು ಕಟಾವು ಮಾಡಿದ್ದು, 80 ಟನ್ ಸಕ್ಕರೆ ಕಾರ್ಖಾನೆಗೆ ಸಾಗಿಸಲಾಗಿತ್ತು.

ಬಾಕಿ 2 ಎಕರೆ ಪ್ರದೇಶದ ಕಬ್ಬು ಕಟಾವು ಮಾಡಲು ಸಿದ್ಧತೆ ಮಾಡಿಕೊಳ್ಳಲಾಗಿತ್ತು. ಆದರೆ ರಾತ್ರಿ ವೇಳೆ ವಿದ್ಯುತ್ ಕಂಬದಿಂದ ಪಂಪ್ ಸೆಡ್ ಮೋಟರ್ ರವರೆಗೆ ಎಳೆಯಲಾದ ವಿದ್ಯುತ್ ಕೇಬಲ್ ಸುಟ್ಟು ಬೆಳೆದು ನಿಂತಿದ್ದ ಕಬ್ಬಿಗೆ ಬೆಂಕಿ



ತಗುಲಿದೆ. ಇದರಿಂದಾಗಿ ರಯತ ಮಲ್ಲಪ್ಪ ತಮಗೆ ಸುಮಾರು 8 ಲಕ್ಷ ರೂ. ಮೌಲ್ಯದ ಹಾನಿ ಸಂಭವಿಸಿದೆ ಎಂದು ಕಂಗಾಲಾಗಿ, ಕಣ್ಣೀರು ಹಾಕುತ್ತಿದ್ದಾರೆ.

ಭೀಕರ ಬರದ ಸಂಕಷ್ಟದ ಮಧ್ಯೆಯೂ ರೈತ ಮಲ್ಲಪ್ಪ ಕಷ್ಟಪಟ್ಟು ಕಬ್ಬು ಬೆಳೆದಿದ್ದ. ಇದೀಗ ವಿದ್ಯುತ್ ಅವಘಡದಿಂದ ಕೈಗೆ ಬಂದ ತುತ್ತು ಬಾಯಿಗೆ ಬರಲಿಲ್ಲ ಎಂಬಂತಾಗಿದೆ ಎಂದು ಅಳಲು ತೋಡಿಕೊಂಡಿದ್ದಾರೆ.

ವಿಷಯ ತಿಳಿಯುತ್ತಲೇ ಸ್ಥಳಕ್ಕೆ ಧಾವಿಸಿರುವ ಅಗ್ನಿಶಾಮಕ ದಳದ ಸಿಬ್ಬಂದಿ ಬೆಂಕಿ ನಂದಿಸಲು ಮುಂದಾಗಿದ್ದಾರೆ. ಕಂದಾಯ, ಪೊಲೀಸ ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

# ಬೆಳಗಾವಿ ಸುವರ್ಣಸೌಧದಲ್ಲೂ ಹೈಅಲರ್ಟ್



ಬೆಳಗಾವಿ: ಲೋಕಸಭೆಯಲ್ಲಿ ಕೆಲ ದುಷ್ಕರ್ಮಿಗಳು ಸದನದೊಳಗೆ ನುಗ್ಗಿ ಅವಾಂತರ ಸೃಷ್ಟಿಸಿದ ಹಿನ್ನೆಲೆ ಬೆಳಗಾವಿ ಸುವರ್ಣಸೌಧದಲ್ಲೂ ಕಟ್ಟೆಚ್ಚರ ವಹಿಸಲಾಗಿದೆ. ಹೌದು.. ಲೋಕಸಭಾ ಕಲಾಪದ ವೇಳೆ ಭಾರೀ ಭದ್ರತಾ ಲೋಪವಾಗಿದೆ. ಪ್ರೇಕ್ಷಕರ ಗ್ಯಾಲರಿಯಿಂದ ಇಬ್ಬರು ಏಕಾಏಕಿ ಸದನದೊಳಗೆ ನುಗ್ಗಿ ಬಂದಿದ್ದಾರೆ. ಅಲ್ಲದೇ ಕಲರ್ ಸ್ಮೋಕ್ ಹರಡಿ ಆತಂಕ ಮೂಡಿಸಿದ್ದಾರೆ. ಇದರ ಬೆನ್ನಲ್ಲೇ ಇತ್ತ ಬೆಳಗಾವಿಯ ಸುವರ್ಣಸೌಧದಲ್ಲೂ ಸಹ ಭದ್ರತಾ ಪರಿಶೀಲನೆ ನಡೆಸಲಾಗಿದೆ. ಖುದ್ದು ಸ್ಪೀಕರ್ ಯುಟಿ ಖಾದರ್ ಅವರು ಸುವರ್ಣಸೌಧದ ಭದ್ರತೆ ಬಗ್ಗೆ ಮಾಹಿತಿ ಪಡೆದುಕೊಂಡರು.

ಬೆಳಗಾವಿ ಜಿಲ್ಲಾಧಿಕಾರಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಹಾಗೂ ಸುವರ್ಣ ಸೌಧದ ಮಾರ್ಷಲ್‌ಗಳಿಂದ ಮಾಹಿತಿ ಪಡೆದುಕೊಂಡರು. ಅಲ್ಲದೇ ಸಭಾಂಗಣದ ಸುತ್ತ ರೌಂಡ್ ಹಾಕಿ ಭದ್ರತಾ ವ್ಯವಸ್ಥೆ ಪರಿಶೀಲಿಸಿದ್ದು, ಶಾಸಕರು, ಸಚಿವರ ಆಪ್ತ ಸಹಾಯಕರು(ಪಿಎ) ಎಂದು ಹೇಳಿಕೊಂಡು ಬರುವವರ ಬಗ್ಗೆ ನಿಗಾ ವಹಿಸುವಂತೆ ಭದ್ರತಾ ಸಿಬ್ಬಂದಿ, ಅಧಿಕಾರಿಗಳಿಗೆ ಸ್ಪೀಕರ್ ಖಡಕ್ ಸೂಚನೆ ನೀಡಿದ್ದಾರೆ.

ಸ್ಪೀಕರ್ ಸೂಚನೆ ಬೆನ್ನಲ್ಲೇ ಎಚ್ಚೆತ್ತ ಮಾರ್ಷಲ್‌ಗಳು. ವಿಧಾನಸಭೆ ಸಭಾಂಗಣ ಪ್ರವೇಶಿಸುವ ಪತ್ರಕರ್ತರು, ಅಧಿಕಾರಿಗಳು ಹಾಗೂ ಇತರೆ ಸಿಬ್ಬಂದಿ ಪಾಸ್ ಮಾದರಿ ಸಂಗ್ರಹಿಸಿ ಪರಿಶೀಲನೆ ನಡೆಸಿದ್ದಾರೆ.

## ರೈತ ಪರ ಯೋಜನೆಗಳ ಮುಂದುವರಿಕೆ: ಸಚಿವ ಚೆಲುವರಾಯಸ್ವಾಮಿ

# ಹುಕ್ಕೇರಿಯಲ್ಲಿ ಕೃಷಿ ಡಿಪ್ಲೋಮಾ ಕಾಲೇಜಿನ ನೂತನ ಕಟ್ಟಡ ಉದ್ಘಾಟನೆ

ಹುಕ್ಕೇರಿ: ಕೃಷಿಭಾಗ್ಯ, ನವೋದ್ಯಮ ಸೇರಿದಂತೆ ಕೃಷಿ ಚಟುವಟಿಕೆಗಳಿಗೆ ಪೂರಕವಾಗಿರುವ ರೈತ ಪರ ಯೋಜನೆಗಳನ್ನು ಕಾಂಗ್ರೆಸ್ ಸರ್ಕಾರ ಮುಂದುವರೆಸಲಿದೆ ಎಂದು ಕೃಷಿ ಸಚಿವ ಎನ್.ಚೆಲುವರಾಯಸ್ವಾಮಿ ಹೇಳಿದರು.

ಪಟ್ಟಣ ಹೊರವಲಯದ ಕೃಷಿ ಸಂಶೋಧನಾ ಕೇಂದ್ರದ ಆವರಣದಲ್ಲಿ ಬುಧವಾರ ಧಾರವಾಡ ಕೃಷಿ ವಿಶ್ವವಿದ್ಯಾಲಯ ಅಧೀನದ ಕೃಷಿ ಡಿಪ್ಲೋಮಾ ಕಾಲೇಜಿನ ನೂತನ ಕಟ್ಟಡ ಉದ್ಘಾಟಿಸಿ ಮಾತನಾಡಿದ ಅವರು, ರೈತ ಸಮೂಹದ ಬಲವರ್ಧನೆಗೆ ರಾಜ್ಯ ಸರ್ಕಾರ ಸದಾ ಬದ್ಧ ಎಂದರು.

ಕೃಷಿಭಾಗ್ಯ ಯೋಜನೆಯಡಿ 32 ಸಾವಿರ ಕೃಷಿ ಹೊಂಡಗಳ ನಿರ್ಮಾಣ ಗುರಿ ಹೊಂದಲಾಗಿದೆ. ನವೋದ್ಯಮ ಯೋಜನೆ ರೂಪಿಸಲಾಗಿದೆ. ರೈತರ ಆರ್ಥಿಕತೆಗೆ ಶಕ್ತಿ ತುಂಬುವ ಅನೇಕ ಸಹಾಯಧನ ಯೋಜನೆಗಳನ್ನು ಮುಂದುವರಿಸಲು ಸರ್ಕಾರ ತೀರ್ಮಾನಿಸಿದೆ. ಈಗಾಗಲೇ 226 ತಾಲೂಕುಗಳನ್ನು ಬರಗಾಲ ಪ್ರದೇಶವೆಂದು ಘೋಷಿಸಿದ್ದು ತಾತ್ಕಾಲಿಕವಾಗಿ 2 ಸಾವಿರ ಮಧ್ಯಂತರ ಪರಿಹಾರ ಘೋಷಿಸಲಾಗಿದೆ ಎಂದು ಅವರು ಹೇಳಿದರು.

ರಾಜ್ಯದಲ್ಲಿ 4 ಕೃಷಿ ವಿಶ್ವವಿದ್ಯಾಲಯಗಳಿದ್ದು ಕೃಷಿ ಡಿಪ್ಲೋಮಾ ಕಾಲೇಜನ್ನು ಕಳೆದ ಬಿಜೆಪಿ ಸರ್ಕಾರವೇ ಸ್ಥಗಿತಗೊಳಿಸಿದೆ. ಹುಕ್ಕೇರಿಯಲ್ಲಿ ದಿ.ಉಮೇಶ ಕತ್ತಿ ಅವರ ಕನಸಿನಂತೆ ಸುಸಜ್ಜಿತ ಕಟ್ಟಡ ನಿರ್ಮಾಣವಾಗಿದೆ.

ಹಾಗಾಗಿ ಬರುವ ದಿನಗಳಲ್ಲಿ ಇಲ್ಲಿಯೇ ಸ್ಥಳೀಯವಾಗಿ ರೈತ ಮಕ್ಕಳಿಗೆ ಅನುಕೂಲ ಕಲ್ಪಿಸುವ ದಿಸೆಯಲ್ಲಿ ಬಿಎಸ್‌ಸಿ ಅಗ್ರಿ, ಡಿಪ್ಲೋಮಾ ಸೇರಿದಂತೆ ಕೃಷಿ ಸಂಬಂಧಿತ ಕೋರ್ಸ್ಗಳನ್ನು ಆರಂಭಿಸಲು ಪ್ರಯತ್ನಿಸಲಾಗುವುದು ಎಂದು ಅವರು ಹೇಳಿದರು.



ಅಧ್ಯಕ್ಷತೆ ವಹಿಸಿದ್ದ ಶಾಸಕ ನಿಖಿಲ ಕತ್ತಿ ಮಾತನಾಡಿ, ಕೈತಪ್ಪಿ ಹೋಗಿದ್ದ ಈ ಕೃಷಿ ಕಾಲೇಜನ್ನು ಮರಳಿ ತರಲಾಗಿದೆ. ವಿದ್ಯಾರ್ಥಿಗಳ ವ್ಯಾಸಂಗ ಬೇಕಾದ ಎಲ್ಲ ಸೌಲಭ್ಯಗಳನ್ನು ಹೊಂದಿದ ಸುಸಜ್ಜಿತ ಕಟ್ಟಡ ನಿರ್ಮಿಸಲಾಗಿದ್ದು ಪುರುಷ ಮತ್ತು ಮಹಿಳೆಯರಿಗೆ ಪ್ರತ್ಯೇಕ ವಸತಿ ನಿಲಯಗಳ ನಿರ್ಮಾಣ ಭರದಿಂದ ಸಾಗಿದೆ. ಕಾರಣ ಹೊಸ ಕಟ್ಟಡದಲ್ಲಿ ಕೃಷಿ ಕೋರ್ಸ್ಗಳನ್ನು ಆರಂಭಿಸಬೇಕು ಎಂದು ಮನವಿ ಮಾಡಿದರು.

ಕುಲಸಚಿವ ಡಾ.ಎಂ.ವಿ.ಮಂಜುನಾಥ, ಆಡಳಿತ ಮಂಡಳಿ ಸದಸ್ಯ ಶ್ರೀನಿವಾಸ ಕೋಟ್ಯಾನ್, ತಾಪಂ ಇಒ ಪ್ರವೀಣ ಕಟ್ಟಿ, ಲೋಕೋಪಯೋಗಿ ಇಲಾಖೆ ಎಇಇ ಪ್ರವೀಣ ಮಾಡ್ಯಾಳ, ಸಹಾಯಕ ಅಭಿಯಂತರರಾದ ಪ್ರಭಾಕರ ಕಾಮತ, ಬಿ.ಆರ್.ಸಂದೀಪ, ಗುತ್ತಿಗೆದಾರ ಪುಂಡಲೀಕ ನಂದಗಾಂವಿ, ಪುರಸಭೆ ಮುಖ್ಯಾಧಿಕಾರಿ ಕಿಶೋರ ಬೆಣ್ಣಿ, ತೋಟಗಾರಿಕೆ ಸಹಾಯಕ ನಿರ್ದೇಶಕ ರಾಜಶೇಖರ ಪಾಟೀಲ, ಸಹಾಯಕ ಕೃಷಿ ನಿರ್ದೇಶಕ ಆರ್.ಬಿ.ನಾಯ್ಕರ, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ಎಇಇ ವಿಜಯ ಮಿಶ್ರಿಕೋಟಿ, ಸಂಜೀವ ಮಿರಜ–ಕರ, ನಿವೃತ್ತ ಅಧಿಕಾರಿ ಎ.ಬಿ.ಪಟ್ಟಣಶೆಟ್ಟಿ, ಮುಖಂಡರಾದ ಅಜ್ಜಪ್ಪ ಕಲ್ಲಟ್ಟಿ, ರಾಯಪ್ಪ ಢೂಗ, ಶೀತಲ ಬ್ಯಾಳಿ, ರವೀಂದ್ರ ಹಿಡಕಲ್ ಮತ್ತಿತರರು ಉಪಸ್ಥಿತರಿದ್ದರು.

ಕೃಷಿ ವಿಶ್ವವಿದ್ಯಾಲಯ ಕುಲಪತಿ ಡಾ.ಪಿ.ಎಲ್.ಪಾಟೀಲ ಪ್ರಾಸ್ತಾವಿಕವಾಗಿ ಮಾತನಾಡಿದರು. ಮುಖ್ಯ ಶಿಕ್ಷಕ ಶ್ರೀಶೈಲ ಹಿರೇಮಠ ನಿರೂಪಿಸಿದರು. ಕೃವಿವಿ ಡೀನ್ ಡಾ.ಆರ್.ಬಸವರಾಜಪ್ಪ ವಂದಿಸಿದರು.

# ಮಹಿಳೆಯನ್ನ ವಿವಸ್ತ್ರಗೊಳಿಸಿದ ಪ್ರಕರಣ: ಸ್ವಯಂಪ್ರೇರಿತ ಪಿಐಎಲ್ ದಾಖಲಿಸಿಕೊಂಡ ಹೈಕೋರ್ಟ್

ಬೆಳಗಾವಿ: ಬೆಳಗಾವಿಯ ವಂಟಮೂರಿ ಗ್ರಾಮದಲ್ಲಿ ಮಹಿಳೆಯನ್ನು ಬೆತ್ತಲೆಗೊಳಿಸಿ ಹಲ್ಲೆ ಮಾಡಿದ ಪ್ರಕರಣಕ್ಕೆ ಸಂಬಂಧಿಸಿದಂತೆ ಹೈಕೋರ್ಟ್ ಸ್ವಯಂಪ್ರೇರಿತ ಪಿಐಎಲ್ ದಾಖಲಿಸಿಕೊಂಡು, ಪ್ರಕರಣದ ತನಿಖೆ ನಡೆಸಿ ವರದಿ ಸಲ್ಲಿಸಲು ಸರ್ಕಾರಕ್ಕೆ ಸೂಚಿಸಿದೆ.

ಭಾರತ, ಸ್ವಾತಂತ್ರ್ಯದ ಅಮೃತ ಮಹೋತ್ಸವ ಆಚರಿಸುತ್ತಿದೆ. ಕರ್ನಾಟಕದಂತಹ ಪ್ರಗತಿಪರ ರಾಜ್ಯದಲ್ಲಿ ಇಂತಹ ಘಟನೆ ಕಳವಳಕಾರಿಯಾಗಿದೆ. ಜೊತೆಗೆ ಮಾಧ್ಯಮಗಳಲ್ಲಿ ಸಂತ್ರಸ್ತೆಯ ಫೋಟೋ, ಸಂದರ್ಶನ ಬಿತ್ತರಿಸದಂತೆ ನಿರ್ಬಂಧ ಹೇರಲಾಗಿದೆ. ಕೆಲ ಮಾಧ್ಯಮಗಳಲ್ಲಿ ಸಂತ್ರಸ್ತೆಯ ಫೋಟೋ, ವಿಡಿಯೋ ಬಿತ್ತರಿಸಲಾಗುತ್ತಿದೆ.

ಇದರಿಂದ ಸಂತ್ರಸ್ತೆ ಘನತೆಗೆ ಧಕ್ಕೆಯಾಗುವ ಹಿನ್ನೆಲೆಯಲ್ಲಿ ನಿರ್ಬಂಧಿಸಲಾಗಿದೆ. ಆದರೆ, ಘಟನೆಯ



ಸುದ್ದಿ ಪ್ರಸಾರಕ್ಕೆ ಯಾವುದೇ ನಿರ್ಬಂಧವಿಲ್ಲ ಎಂದು ಹೈಕೋರ್ಟ್‌ನ ಮುಖ್ಯ ನ್ಯಾಯಾಧೀಶರಾದ ಪ್ರಸನ್ನ ಬಿ.ವರಾಳೆ ಹಾಗೂ ನ್ಯಾ.ಕೃಷ್ಣ ಎಸ್.ದೀಕ್ಷಿತ್ ಅವರಿದ್ದ ಪೀಠ ಆದೇಶಿಸಿದೆ.

# ಅತಿಥಿ ಉಪನ್ಯಾಸಕರ ಬೇಡಿಕೆ ಈಡೇರಿಕೆಗೆ ಶೀಘ್ರ ಕ್ರಮ: ಸುಧಾಕರ

ಬೆಳಗಾವಿ ಸುವರ್ಣಸೌಧ: ಕಳೆದ 15 ದಿನಗಳಿಂದ ರಾಜ್ಯಾದ್ಯಂತ ಸರಕಾರಿ ಪದವಿ ಕಾಲೇಜುಗಳ ಅತಿಥಿ ಉಪನ್ಯಾಸಕರು ಬೇಡಿಕೆ ಈಡೇರಿಕೆಗೆ ಆಗ್ರಹಿಸಿ ಪ್ರತಿಭಟನೆ ನಡೆಸುತ್ತಿದ್ದು, ಇದರಿಂದ ವಿದ್ಯಾರ್ಥಿಗಳಿಗೆ ತೊಂದರೆ ಆಗುತ್ತಿರುವುದು ಸರಕಾರದ ಗಮನಕ್ಕಿದೆ. ಶೀಘ್ರವೇ ಈ ಬಗ್ಗೆ ಕ್ರಮ ಕೈಗೊಳ್ಳಲಾಗುವುದು ಎಂದು ಉನ್ನತ ಶಿಕ್ಷಣ ಸಚಿವ ಡಾ.ಎಂ.ಸಿ.ಸುಧಾಕರ ಭರವಸೆ ನೀಡಿದರು.

ಬೆಳಗಾವಿಯಲ್ಲಿ ಬುಧವಾರ ನಡೆದ ವಿಧಾನ ಪರಿಷತ್ ಕಲಾಪದ ಶೂನ್ಯವೇಳೆಯಲ್ಲಿ ವಿಪಕ್ಷ ಸದಸ್ಯ



ಚಿದಾನಂದ ಅವರು ಅತಿಥಿ ಉಪನ್ಯಾಸಕರ ಹೋರಾಟ ಮತ್ತು ವಿದ್ಯಾರ್ಥಿಗಳ ಸಮಸ್ಯೆ ಕುರಿತು ಸಚಿವರ ಗಮನಕ್ಕೆ ತಂದರು.

ಬೇರೆ ಬೇರೆ ರಾಜ್ಯಗಳಲ್ಲಿ ಅತಿಥಿ ಉಪನ್ಯಾಸಕರನ್ನು ಕಾಯಂ ಮಾಡಿಕೊಂಡಿರುವ ಮಾದರಿಯನ್ನು ಅನುಸರಿಸಬೇಕು. ಈ ವಿಷಯದಲ್ಲಿ ಪ್ರತಿ ಸಲವೂ ಉಮಾದೇವಿ ಪ್ರಕರಣವನ್ನು ಮುಂದಿಟ್ಟುಕೊಂಡು ಅತಿಥಿ ಉಪನ್ಯಾಸಕರಿಗೆ ಆಗುವ ಅನ್ಯಾಯ ನಿಲ್ಲಬೇಕಾದರೆ ವೃಂದ ಮತ್ತು ನೇಮಕಾತಿ ನಿಯಮಗಳಿಗೆ ತಿದ್ದುಪಡಿ ತರಬೇಕು.

ಯುಜಿಸಿ ನಿಗದಿಯಂತೆ ವೇತನ ಪರಿಷ್ಕರಣೆ ಮಾಡಿ, ಅತಿಥಿ ಉಪನ್ಯಾಸಕರಿಗೆ ಸೇವಾಭದ್ರತೆ ಒದಗಿಸಬೇಕು ಎಂದು ಚಿದಾನಂದ ಅವರು ಸಲಹೆ ನೀಡಿದರು.

ಅತಿಥಿ ಉಪನ್ಯಾಸಕರ ಸಮಸ್ಯೆ ನಮ್ಮ ಸರಕಾರ ಅಸ್ತಿತ್ವಕ್ಕೆ ಬಂದಾಗ ಉದ್ಭವಿಸಿದ್ದಲ್ಲ. ಸುಮಾರು 20 ವರ್ಷಗಳಿಂದ ಜೀವಂತವಾಗಿರುವ ಬೇಡಿಕೆ.

ಈಗಾಗಲೇ ಪ್ರತಿಭಟನಾನಿರತ ಅತಿಥಿ ಉಪನ್ಯಾಸಕರೊಂದಿಗೆ ಮಾತನಾಡಿ, ಹೋರಾಟ ಕೈ ಬಿಡುವಂತೆ ಮನವೊಲಿಸುವ ಪ್ರಯತ್ನ ವಿಫಲವಾಗಿದೆ.

ಈ ಬಗ್ಗೆ ಸಿಎಂ ಜೊತೆ ಮಾತನಾಡಿದ್ದು, ಪರಿಹಾರ ಕಂಡುಕೊಂಡಿದ್ದೇವೆ. ಅದಕ್ಕೆ ಕೊಂಚ ಕಾಲಾವಕಾಶದ ಅಗತ್ಯವಿದೆ. ಶೀಘ್ರವೇ ಈ ಸಮಸ್ಯೆಯನ್ನು ಬಗೆಹರಿಸುತ್ತೇವೆ ಎಂದು ಸಚಿವರು ಸದನದಲ್ಲಿ ತಿಳಿಸಿದರು.

# ವೃಕ್ಷಥಾನ್ ಹೆರಿಟೇಜ್ ರನ್: ದೇಶಾದ್ಯಂತ ಗಮನ ಸೆಳೆಯುತ್ತಿದೆ: ಮಹಾಂತೇಶ ಬಿರಾದಾರ

ವಿಜಯಪುರ: ಡಿಸೆಂಬರ್ 24 ರಂದು ನಗರದಲ್ಲಿ ನಡೆಯಲಿರುವ ವೃಕ್ಷಥಾನ್ ಹೆರಿಟೇಜ್ ರನ್– 2023ಕ್ಕೆ ತಾಂತ್ರಿಕ ಸಿದ್ದತೆಗಳನ್ನು ಕೈಗೊಳ್ಳಲಾಗಿದ್ದು, 5 ಕಿ.ಮೀ, 10 ಕಿ.ಮೀ ಮತ್ತು 21 ಕಿ.ಮೀ ಓಟದಲ್ಲಿ ಪಾಲ್ಗೊಂಡ ಕ್ರೀಡಾಪಟುಗಳ ಓಟದ ಭಾವಚಿತ್ರಗಳು ನೇರವಾಗಿ ಅವರ ಇ–ಮೇಲ್ಗೆ ತಲುಪಿಸುವ ವ್ಯವಸ್ಥೆ ಮಾಡಲಾಗಿದೆ ಎಂದು ಡಾ. ಮಹಾಂತೇಶ ಬಿರಾದಾರ ತಿಳಿಸಿದ್ದಾರೆ.

ಬುಧವಾರ ನಗರದಲ್ಲಿ ವೃಕ್ಷಥಾನ್ ಹೆರಿಟೇಜ್ ರನ್– 2023 ಪೂರ್ವ ಸಿದ್ಧತೆಗಳ ಕುರಿತು ನಡೆದ ಕೋರ್ ಕಮೀಟಿ ಸಭೆಯಲ್ಲಿ ಮಾತನಾಡಿದ ಅವರು, ಈ ಓಟದಲ್ಲಿ ಪಾಲ್ಗೋಳ್ಳುತ್ತಿರುವ ಫೇಸರ್, ಅಂಬಾಸೀಡರ್ ಮತ್ತು ಪ್ರಮುಖ ಕ್ರೀಡಾಪಟುಗಳು ಈ ಬಾರಿಯ ಕಾರ್ಯಕ್ರಮಕ್ಕೆ ಹೆಚ್ಚಿನ ಮೆರಗು ನೀಡುತ್ತಿದ್ದಾರೆ.

ಅಲ್ಲದೇ, ಕ್ರೀಡಾಪಟುಗಳು ಓಡುವ ಮಾರ್ಗದಲ್ಲಿ ಅಲ್ಲಲ್ಲಿ ನಾನಾ ಸಾಂಸ್ಕೃತಿಕ ಕಲಾ ತಂಡಗಳು ತಮ್ಮ ಸಂಗೀತ ಮತ್ತು ನೃತ್ಯ ಪ್ರದರ್ಶನ ಮೂಲಕ ಓಟಗಾರರಿಗೆ ಪ್ರೋತ್ಸಾಹ ನೀಡಲಿದ್ದಾರೆ. ಕೋರ್ ಕಮೀಟಿಯ ಎಲ್ಲ ಪದಾಧಿಕಾರಿಗಳು ಮತ್ತು ಜಿಲ್ಲಾಡಳಿತದ ಸಹಕಾರದಿಂದ ಹೆರಿಟೇಜ್ ರನ್ಗೆ ಭಾರಿ ಬೆಂಬಲ ವ್ಯಕ್ತವಾಗುತ್ತಿದೆ. ಈ ಭಾರಿಯ ಕಾರ್ಯಕ್ರಮ ರಾಜ್ಯವಷ್ಟೇ ಅಲ್ಲ ದೇಶಾದ್ಯಂತ ಗಮನ ಸೆಳೆಯುತ್ತಿದ್ದು ಸಂಪೂರ್ಣ ಯಶಸ್ವಿಯಾಗಲಿದೆ ಎಂದು ಹೇಳಿದರು.



ಈ ಸಭೆಯಲ್ಲಿ ಖ್ಯಾತ ಓಟಗಾರರಾದ ರಾಜಿಂದರ್ ಕೌರ್, ಶೋಭಾ ನರೇಂದ್ರಕುಮಾರ ನಾಗಶೆಟ್ಟಿ ಕೂಡ ಪಾಲ್ಗೊಂಡು ಸಿದ್ಧತೆ ಪರಿಶೀಲನೆ ಜೊತೆಗೆ ಸಲಹೆ ಸೂಚನೆಗಳನ್ನು ಆಲಿಸಿದರು. ಸಿ.ಆರ್.ಡಿ.ಎಸ್ ಫೌಂಡೇಶನ್ ಸಂಸ್ಥಾಪಕ ನಿರ್ದೇಶಕಿಯೂ ಆಗಿರುವ ಶೋಭಾ ನರೇಂದ್ರಕುಮಾರ ನಾಗಶೆಟ್ಟಿ ಮಾತನಾಡಿ, ರಾಷ್ಟ್ರಮತ್ತು ಅಂತಾರಾಷ್ಟ್ರೀಯ ಓಟಗಾರರು ಈ ವೃಕ್ಷಥಾನ್ ಹೆರಿಟೇಜ್ ರನ್– 2023 ನಲ್ಲಿ ಪಾಲ್ಗೋಳ್ಳುತ್ತಿರುವುದು ಈ ಬಾರಿಯ ಕಾರ್ಯಕ್ರಮದ ಜನಪ್ರೀಯತೆಗೆ ಸಾಕ್ಷಿಯಾಗಿದೆ. ಇದರಿಂದ ಮುಂಬರುವ ದಿನಗಳಲ್ಲಿ ವಿಜಯಪುರ ಜಿಲ್ಲೆಯ ಜನತೆ ಮ್ಯಾರಾಥಾನ್ಗಳಲ್ಲಿ ಪಾಲ್ಗೋಳ್ಳಲು ಸ್ಪೂರ್ತಿಯಾಗಿದೆ ಎಂದು ಹೇಳಿದರು.

ಅಂತಾರಾಷ್ಟ್ರೀಯ ಖ್ಯಾತಿಯ ಅಲ್ಟ್ರಾ ಮ್ಯಾರಾಥಾನ್ ಕ್ರೀಡಾಪಟು 53 ವರ್ಷದ ರಾಜಿಂದರ್ ಕೌರ್ ಮಾತನಾಡಿ, ನಾನು ಈ ಮುಂಚೆ ದೇಶ ಮತ್ತು ವಿದೇಶಗಳಲ್ಲಿ ಹಲವಾರು ಓಟಗಳಲ್ಲಿ ಪಾಲ್ಗೊಂಡಿದ್ದೇನೆ. ಆದರೆ, ವೃಕ್ಷಥಾನ್ ಹೆರಿಟೇಜ್ ರನ್– 2023 ನಲ್ಲಿ ಪಾಲ್ಗೋಳ್ಳಲು ಸಾವಿರಾರು ಜನ ತಮ್ಮ ಹೆಸರುಗಳನ್ನು ನೋಂದಾಯಿಸಿರುವುದು ಅಚ್ಚರಿಯಷ್ಟೇ ಅಲ್ಲ, ಅತೀ ಹೆಚ್ಚು ಸಂತಸವನ್ನುಂಟು ಮಾಡಿದೆ ಎಂದು ಹರ್ಷ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ನೋಂದಣಿ ಸಮಿತಿ ಉಸ್ತುವಾರಿ ಡಾ. ಮಲ್ಲಿಕಾರ್ಜುನ ಯಲಗೊಂಡ ಮತ್ತು ವೀರೇಂದ್ರ ಗುಚ್ಚೆಟ್ಟಿ ಈವರೆಗೆ 7000ಕ್ಕೂ ಹೆಚ್ಚು ಜನ ತಮ್ಮ ಹೆಸರನ್ನು ನೋಂದಣಿ ಮಾಡಿಸಿಕೊಂಡಿದ್ದಾರೆ. ಈ ಸಂಖ್ಯೆ 8000 ದಾಟುವ ನಿರೀಕ್ಷೆ ಇದೆ ಎಂದು ಮಾಹಿತಿ ನೀಡಿದರು.

ಖ್ಯಾತ ಉದ್ಯಮಿ ಚಂದ್ರಕಾಂತ ಶೆಟ್ಟಿ ಮಾತನಾಡಿ, ಕಾರ್ಯಕ್ರಮ ಆಯೋಜನೆ ಕುರಿತು ಕೈಗೊಳ್ಳಲಾದ ವ್ಯವಸ್ಥೆಗಳ ಕುರಿತು ಮಾಹಿತಿ ನೀಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ಸಂಚಾಲಕ ಮುರಗೇಶ ಪಟ್ಟಣಶೆಟ್ಟಿ, ಈಗಾಗಲೇ ವೃಕ್ಷಥಾನ್ ಹೆರಿಟೇಜ್ ರನ್– 2023 ಕುರಿತು ಶಾಲಾ ಕಾಲೇಜುಗಳು, ಸಂಘ ಸಂಸ್ಥೆಗಳಿಗೆ ತೆರಳಿ ಜಾಗೃತಿ ಮೂಡಿಸಲಾಗಿದೆ. ಇದಕ್ಕೆ ಪ್ರತಿಯಾಗಿ ಸಾವಿರಾರು ವಿದ್ಯಾರ್ಥಿಗಳು ಮತ್ತು ಯುವಕರು ಹೆಸರು ನೋಂದಾಯಿಸಿದ್ದಾರೆ. ಅಲ್ಲದೇ, ರೂಟ್, ಹೈಡ್ರೇಶನ್ ಪಾಯಿಂಟ್ಸ್, ಕ್ರೀಡಾಪಟುಗಳು ಓಡುವ ಪ್ರಮುಖ ಸ್ಥಳಗಳಿಗೆ ತೆರಳಿ ಪರಿಶೀಲನೆ ನಡೆಸಲಾಗಿದೆ. ನಗರದ ಎಲ್ಲರೂ ಈ ಕ್ರೀಡಾಕೂಟಕ್ಕೆ ಸಂಪೂರ್ಣ ಬೆಂಬಲ ವ್ಯಕ್ತಪಡಿಸಿದ್ದಾರೆ ಎಂದು ತಿಳಿಸಿದರು.

ನಾವೇದ ನಾಗಠಾಣ ಮಾತನಾಡಿ, ಈವರೆಗೆ ಸಾಮಾಜಿಕ ಜಾಲತಾಣಗಳಲ್ಲಿ ವೃಕ್ಷಥಾನ್ ಹೆರಿಟೇಜ್ ರನ್– 2023 ಆಯೋಜನೆ ಕುರಿತು ವ್ಯಾಪಕ ಪ್ರಚಾರ ಕೈಗೊಳ್ಳಲಾಗಿದೆ. ಅಲ್ಲದೇ, ಇದರಲ್ಲಿ ಪಾಲ್ಗೋಳ್ಳುತ್ತಿರುವ ಖ್ಯಾತನಾಮರ ಕುರಿತು ಕೂಡ ಮಾಹಿತಿ ನೀಡಲಾಗಿದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಕೋರ್ ಕಮೀಟಿಯ ಮುಖಂಡರಾದ ಸಂಕೇತ ಬಗಲಿ, ಶಿವನಗೌಡ ಪಾಟೀಲ, ಸಂಗಮೇಶ ಬಬಲೇಶ್ವರ, ಶಾಂತೇಶ ಕಳಸಗೊಂಡ, ಸಂತೋಷ ಔರಸಂಗ, ಶಿವಾನಂದ ಯರನಾಳ, ಅಮೀತ ಬಿರಾದಾರ, ನಾವೀದ ನಾಗಠಾಣ, ಸೋಮು ಮಠ, ಆಕಾಶ ಚೌಕಿಮಠ, ಮಹೇಶ ವಿ. ಶಟಗಾರ, ಜಗದೀಶ ಪಾಟೀಲ ಮುಂತಾದವರು ಉಪಸ್ಥಿತರಿದ್ದರು.

ಸಂಪುಟ: 4 ಸಂಚಿಕೆ: 264 ಪುಟ: 4 RNI: KARKAN/2020/79084 Regn,No:G-2/PMG/KA/NK/BM/139/2021-23

BELAGAVI VARADI KANNADA DAILY MORNING : Editor, Printer, Publisher & Owned By : **Satish Basavani Gudagenatti,** Basavani House No.53, Ashray Colony, Sarathi Nagar, Tv Center - 590019, TQ & DIST Belagavi, Karnataka.

Printed At : LAXMI PRINTERS, No.627. Auto Nagar - 590016.TQ & DIST Belagavi, Karnataka Mob : 9900332089